• ಮಂಡ್ಯ • ಮೈಸೂರು • ಚಾಮರಾಜನಗರ • ಹಾಸನ • ರಾಮನಗರ • ತುಮಕೂರು • ಬೆಂಗಳೂರು ಗ್ರಾಮಾಂತರ • ಬೆಂಗಳೂರು ನಗರ

ಕಾಯಕ ಯೋಗಿ

ಸಂಪಾದಕರು: ಅರುಣಜ್ಯೋತಿ ಬಿ.ಕೆ. KAYAKA YOGI- Regional Daily ಪ್ರಾದೇಶಿಕ ದಿನಪತ್ರಿಕೆ

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ MONDYA | ಸಂಪುಟ VOLUME 07 | ಸಂಚಿಕೆ ISSUE 59 | ಬುಧವಾರ WEDNESDAY | 12-06-2024 | ಪುಟಗಳು Pages 06 | ಬೆಲೆ Rates 02 | ಸಂಪರ್ಕ 9980605484

ರೇಣುಕಾಸ್ವಾಮಿ ಕೊಲೆ ಪ್ರಕರಣ
ಚಾಲೆಂಜಿಂಗ್ ಸ್ಟಾರ್ ದರ್ಶನ್ ಅರೆಸ್ಟ್



ಕಾಯಕಯೋಗಿ ಸುದ್ದಿ

ಬೆಂಗಳೂರು: ಸ್ಯಾಂಡಲ್‌ವುಡ್‌ನ ಪ್ರಸಿದ್ಧ ನಟ ಚಾಲೆಂಜಿಂಗ್ ಸ್ಟಾರ್ ದರ್ಶನ್ ಅವರನ್ನು ಕೊಲೆ ಪ್ರಕರಣ ಸಂಬಂಧ ಕಾಮಾಕ್ಷಿಪಾಳ್ಯ ಪೊಲೀಸರು ಇಂದು ಬೆಳಿಗ್ಗೆ ಮೈಸೂರಿನ ಹೋಟೆಲ್ ಒಂದರಲ್ಲಿ ಅವರನ್ನು ಬಂಧಿಸಲಾಗಿದೆ.ಇಂದು ಬೆಳಿಗ್ಗೆ ಬೆಳಕಿಗೆ ಬಂದ ಈ ಸುದ್ದಿ ಚಿತ್ರರಂಗವನ್ನೇ ಬೆಚ್ಚಿಬೀಳಿಸಿದ್ದು, ಅಭಿಮಾನಿಗಳನ್ನು ದಂಗು ಬಡಿಯುವಂತೆ ಮಾಡಿದೆ.

ಕೊಲೆಯಾದ ಚಿತ್ರದುರ್ಗದ ರೇಣುಕಾಸ್ವಾಮಿ(33) ಅವರು ನಟಿ ಪವಿತ್ರಾಗೌಡ ಅವರಿಗೆ ಅಶ್ಲೀಲ ಸಂದೇಶ ಕಳುಹಿಸುತ್ತಿದ್ದರು ಎಂಬ ಕಾರಣಕ್ಕಾಗಿ ಈ ಘಟನೆ ನಡೆದಿದೆ ಎಂದು ಹೇಳಲಾಗಿದೆ. ದರ್ಶನ್ ಅಭಿಮಾನಿಗಳ ಸಂಘದ ಅಧ್ಯಕ್ಷ ರಾಘವೇಂದ್ರ ಅವರಿಗೆ ಕರೆ ಮಾಡಿದ ದರ್ಶನ್ ಅವರು ರೇಣುಕಾಸ್ವಾಮಿಯನ್ನು ಚಿತ್ರದುರ್ಗದಿಂದ ಬೆಂಗಳೂರಿಗೆ ಕರೆತರುವಂತೆ ಸೂಚಿಸಿದ್ದರು ಎನ್ನಲಾಗಿದೆ.

ಅದರಂತೆ ರೇಣುಕಾಸ್ವಾಮಿಯನ್ನು ಜೂ.8 ರಂದು ನಗರಕ್ಕೆ ಕರೆತಂದು ಅಲ್ಲಿಂದ ಕಾಮಾಕ್ಷಿಪಾಳ್ಯದ ದರ್ಶನ್ ಆಪ್ತ ವಿನಯ್ ಎಂಬುವರ ಷೆಡ್‌ನಲ್ಲಿ ಕೂಡಿಹಾಕಿ ರಾತ್ರಿ ಐದಾರು ಮಂದಿ ಸೇರಿ ಹಲ್ಲೆ ನಡೆಸಿದ್ದರು. ತಲೆ, ಕತ್ತು ಹಾಗೂ ಮುಖಕ್ಕೆ ಬಲವಾದ ಪೆಟ್ಟು ಬಿದ್ದಿದ್ದು, ರಾಡ್‌ನಿಂದ ಹಲ್ಲೆ ನಡೆಸಿರುವ ಕಾರಣಕ್ಕೆ ರೇಣುಕಾಸ್ವಾಮಿ ಮೃತಪಟ್ಟಿದ್ದಾರೆ.

ನಂತರ ಶವವನ್ನು ಕಾಮಾಕ್ಷಿಪಾಳ್ಯ ವ್ಯಾಪ್ತಿಯ ಸುಮನಹಳ್ಳಿಯ ಮೋರಿಯೊಂದರಲ್ಲಿ ಎಸೆದು ಆರೋಪಿಗಳು ಪರಾರಿಯಾಗಿದ್ದರು. ಜೂ.9ರಂದು ಬೆಳಿಗ್ಗೆ ನಾಯಿ ಶವವನ್ನು ಎಳೆದಾಡುತ್ತಿದ್ದಾಗ ಸಮೀಪದ ಅಪಾರ್ಟ್‌ಮೆಂಟ್‌ನ ಭದ್ರತಾ ಸಿಬ್ಬಂದಿಯೊಬ್ಬರು ಸಮೀಪ ಹೋಗಿ ನೋಡಿದಾಗ ವ್ಯಕ್ತಿಯ ಮೃತದೇಹ ಪತ್ತೆಯಾಗಿದೆ.

ತಕ್ಷಣ ಈ ಬಗ್ಗೆ ಅವರು ಪೊಲೀಸರಿಗೆ ಮಾಹಿತಿ ನೀಡಿದ್ದರು. ಸ್ಥಳಕ್ಕಾಗಮಿಸಿದ ಕಾಮಾಕ್ಷಿಪಾಳ್ಯ ಠಾಣೆಯ ಪೊಲೀಸರು ಪರಿಶೀಲನೆ ನಡೆಸಿ ಮೃತದೇಹವನ್ನು ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಾಗ ಕೊಲೆಯಾದ ವ್ಯಕ್ತಿ ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಎಂಬುದು ಗೊತ್ತಾಗಿದೆ.

ಈ ಮೊದಲು ಇದು ಆತಹತ್ಯೆ ಎಂಬಂತೆ ಮೇಲ್ನೋಟಕ್ಕೆ ಕಂಡುಬಂದಿತ್ತು. ನಂತರ ಮರಣೋತ್ತರ ಪರೀಕ್ಷಾ ವರದಿಯಲ್ಲಿ ಕೊಲೆ ಎಂಬುದು ಗೊತ್ತಾಗಿದೆ.ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಪೊಲೀಸರು ತನಿಖೆ ಚುರುಕುಗೊಳಿಸಿ ರೇಣುಕಾಸ್ವಾಮಿಯ ಪೂರ್ವಾಪರ ಮಾಹಿತಿಯನ್ನು ಕಲೆ ಹಾಕಿ ಅವರ ಮೊಬೈಲ್‌ನಲ್ಲಿರುವ ಕರೆಪಟ್ಟಿ ಮತ್ತು ಸಿಸಿಟಿವಿಗಳ ಜಾಡು ಹಿಡಿದು ತನಿಖೆ ಮುಂದುವರೆಸಿದ ಪೊಲೀಸರು ವಿನಯ್ ಹಾಗೂ ಇತರ ನಾಲ್ವರನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದಾಗ ಕೊಲೆ ಪ್ರಕರಣ ಬೆಳಕಿಗೆ ಬಂದಿದೆ.

ಅವರು ನೀಡಿದ ಮಾಹಿತಿ ಪ್ರಕಾರ ಹಲ್ಲೆ ನಡೆಸಿದ ಐವರ ತಂಡದಲ್ಲಿ ನಟ ದರ್ಶನ್ ಕೂಡ ಇದ್ದರು ಎಂದು ಹೇಳಲಾಗಿದೆ. ಹಲವು ಆಯಾಮಗಳಲ್ಲಿ ಕೂಲಂಕುಷವಾಗಿ ಮಾಹಿತಿ ಕಲೆಹಾಕಿದಾಗ ಆರೋಪಿಗಳೊಂದಿಗೆ ನಟ ದರ್ಶನ್ ಸಹ ಸಂಪರ್ಕದಲ್ಲಿರುವುದನ್ನು ಮತ್ತು ಹಲ್ಲೆ ನಡೆಸಿದ ಸಂದರ್ಭದಲ್ಲಿ ಅವರೂ ಸಹ ಆ ತಂಡದಲ್ಲಿ ಇರುವುದನ್ನು ಖಚಿತಪಡಿಸಿಕೊಂಡಿದ್ದಾರೆ.

ಕೊಲೆಯಂತಹ ಗಂಭಿರ ಸ್ವರೂಪದ ಪ್ರಕರಣ ಆಗಿರುವುದರಿಂದ ಇಂದು ಬೆಳಿಗ್ಗೆ ಮೈಸೂರಿನಲ್ಲಿ ದರ್ಶನ್‌ರನ್ನು ವಶಕ್ಕೆ ಪಡೆದುಕೊಂಡು ಬೆಂಗಳೂರಿಗೆ ಕರೆತಂದಿದ್ದು, ಬೌರಿಂಗ್ ಆಸ್ಪತ್ರೆಯಲ್ಲಿ ಆರೋಗ್ಯ ತಪಾಸಣೆ ನಡೆಸಿ ನ್ಯಾಯಾಲಯಕ್ಕೆ ಹಾಜರುಪಡಿಸುವ ಸಾಧ್ಯತೆಯಿದೆ.

ರೇಣುಕಾಸ್ವಾಮಿಯವರ ಕುಟುಂಬಕ್ಕೆ ಮಾಹಿತಿ ನೀಡಲಾಗಿದ್ದು, ಪೋಷಕರು ಹಾಗೂ ಸಂಬಂಧಿಕರು ನಗರಕ್ಕೆ ಬಂದಿದ್ದು, ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆ ಮುಂದೆ ಅವರ ದುಃಖ ಮುಗಿಲು ಮುಟ್ಟಿತ್ತು.

ನಟಿ ಪವಿತ್ರಗೌಡ ಅವರು ದರ್ಶನ್ ಜೊತೆಗಿದ್ದ ಫೋಟೊ ಹಾಗೂ ವಿಡಿಯೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿ ಹತ್ತು ವರ್ಷಗಳ ನಿರಂತರ ಪಯಣ ಎಂದು ಹೇಳಿಕೊಂಡಿದ್ದರು. ಇದಕ್ಕೆ ಪ್ರತಿಯಾಗಿ ದರ್ಶನ್ ಅವರ ಪತ್ನಿ ವಿಜಯಲಕ್ಷ್ಮಿ ಅವರು ಬಹಿರಂಗವಾಗಿ ಅಸಮಾಧಾನ ವ್ಯಕ್ತಪಡಿಸಿದ್ದರು. ಇದು ಸಾಮಾಜಿಕ ಜಾಲತಾಣಗಳಲ್ಲಿ ಕಳೆದ ಎರಡು ತಿಂಗಳ ಹಿಂದೆ ಕಾವೇರಿದ ಚರ್ಚೆಗೂ ಕಾರಣವಾಗಿತ್ತು. ಈ ನಡುವೆ ರೇಣುಕಾಸ್ವಾಮಿ ಅವರು ಪವಿತ್ರಗೌಡರನ್ನು ನಿಂದಿಸಿದ್ದರು ಎಂದು ತಿಳಿದುಬಂದಿದೆ.

ನಟಿ ವಿಚಾರಣೆ

ಪ್ರಕರಣಕ್ಕೆ ಸಂಬಂಧಪಟ್ಟಂತೆ ಪವಿತ್ರಾಗೌಡ ಅವರನ್ನು ಕೂಡ ಕರೆತರಲಾಗಿದ್ದು, ಆರ್.ಆರ್.ನಗರ ಠಾಣೆಯ ಪೊಲೀಸರು ವಿಚಾರಣೆಗೊಳಪಡಿಸಿ ಮಾಹಿತಿ ಪಡೆದುಕೊಳ್ಳುತ್ತಿದ್ದಾರೆ.

ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಪೊಲೀಸ್ ವಶಕ್ಕೆ: ಜಿ. ಪರಮೇಶ್ವರ್



ಬೆಂಗಳೂರು: ಚಿತ್ರದುರ್ಗದ ವ್ಯಕ್ತಿಯೊಬ್ಬರ ಕೊಲೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ವಿಚಾರಣೆ ವೇಳೆ ದರ್ಶನ್ ಅವರ ಹೆಸರು ಬಂದಿದ್ದು, ಈ ಹಿನ್ನೆಲೆಯಲ್ಲಿ ಪೊಲೀಸರು ದರ್ಶನ್‌ರನ್ನು ಬಂಧಿಸಿ ವಿಚಾರಣೆ ನಡೆಸಲಾಗಿದೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ದರ್ಶನ್ ಅವರ ಹೆಸರು ಯಾವ ಕಾರಣಕ್ಕೆ ಈ ಪ್ರಕರಣದಲ್ಲಿ ಬಂದಿದೆ ಗೊತ್ತಿಲ್ಲ. ಮೃತಪಟ್ಟ ರೇಣುಕಾಸ್ವಾಮಿ ಪವಿತ್ರಾಗೌಡರ ಮೊದಲ ಪತಿ ಎಂಬ ಮಾಹಿತಿ ಕೂಡ ಅಸ್ಪಷ್ಟವಾಗಿದೆ. ವಿಚಾರಣೆ ಹಂತದಲ್ಲಿರುವುದರಿಂದ ಸದ್ಯಕ್ಕೆ ಯಾವುದನ್ನೂ ಹೇಳಲಾಗುವುದಿಲ್ಲ ಎಂದರು.

ಕ್ರಿಕೆಟ್ ಪಂದ್ಯಾವಳಿ ವೀಕ್ಷಕರಿಗೆ ಬಿಎಂಟಿಸಿ ಬಸ್ ಸೌಲಭ್ಯ



ಬೆಂಗಳೂರು: ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿರುವ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯಾವಳಿ ವೀಕ್ಷಣೆಗೆ ಬಂದುಹೋಗುವ ಸಾರ್ವಜನಿಕರ ಅನುಕೂಲಕ್ಕಾಗಿ ಬಸ್ ಸೌಲಭ್ಯ ಒದಗಿಸಲಿದೆ. ಜೂ.13, 16, 19 ಹಾಗೂ 23ರಂದು ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯಾವಳಿಗಳು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿದೆ. ಆಯಾ ದಿನಗಳಂದು ಕ್ರಿಕೆಟ್ ಪಂದ್ಯಾವಳಿ ವೀಕ್ಷಣೆಗೆ ಬಂದುಹೋಗುವ ಸಾರ್ವಜನಿಕರ ಅನುಕೂಲಕ್ಕಾಗಿ ಬಿಎಂಟಿಸಿ ವ್ಯವಸ್ಥಿತ ಸಾರಿಗೆ ಸೌಲಭ್ಯವನ್ನು ಒದಗಿಸಲಿದೆ.

ಮೂವರು ಡಿಸಿಎಂ ಬೇಕು: ಸಚಿವ ಕೆ.ಎನ್. ರಾಜಣ್ಣ



ತುಮಕೂರು: ಈವರೆಗೆ ತಣ್ಣಗಾಗಿದ್ದ ಮೂವರು ಉಪ ಮುಖ್ಯಮಂತ್ರಿಗಳ ನೇಮಕ ವಿಚಾರ, ಲೋಕಸಭೆ ಚುನಾವಣೆ ನಂತರ ಮತ್ತೆ ಮುನ್ನೆಲೆಗೆ ಬಂದಿದೆ. ಮೂವರು ಡಿಸಿಎಂ ನೇಮಕ ಮಾಡಬೇಕು ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ಮತ್ತೊಮ್ಮೆ ಒತ್ತಾಯಿಸಿದ್ದಾರೆ. ತುಮಕೂರು ನಗರದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿ, 'ಮುಂದಿನ ದಿನಗಳಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆ ಬರಲಿದೆ. ಮೂವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಿದರೆ ಪಕ್ಷಕ್ಕೆ ಅನುಕೂಲವಾಗಲಿದೆ' ಎಂದು ಹೇಳಿದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಇಂದು ಸಾರಿಗೆ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ಜರುಗಿತು.ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ, ರಾಜಕೀಯ ಕಾರ್ಯದರ್ಶಿಗಳಾದ ನಸೀರ್ ಅಹ್ಮದ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ರಜನೀಶ್ ಗೋಯೆಲ್, ಆರ್ಥಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್, ಆರ್ಥಿಕ ಇಲಾಖೆ ಕಾರ್ಯದರ್ಶಿ ಪಿ.ಸಿ.ಜಾಫರ್, ಸಾರಿಗೆ ಇಲಾಖೆ ಕಾರ್ಯದರ್ಶಿ ಡಾ. ಎನ್.ವಿ. ಪ್ರಸಾದ್, ಉಪಸ್ಥಿತರಿದ್ದರು.

ತಂತ್ರಜ್ಞಾನ, ಡಿಜಿಟಲ್ ವ್ಯವಸ್ಥೆಗೆ ಉತ್ತೇಜನ: ಅಶ್ವಿನಿ ವೈಷ್ಣವ್

ಬೆಂಗಳೂರು: 'ಸೆಮಿಕಂಡಕ್ಟರ್ ಮತ್ತು ಎಲೆಕ್ಟ್ರಾನಿಕ್ಸ್ ಉಪಕರಣಗಳ ತಯಾರಿಕೆಯಲ್ಲಿ ಭಾರತವು ಮುಂಚೂಣಿ ಸ್ಥಾನಕ್ಕೇರಲು ಅಗತ್ಯವಿರುವ ಎಲ್ಲಾ ಕ್ರಮಕೈಗೊಳ್ಳಲು ಸರ್ಕಾರ ಸಿದ್ಧವಿದೆ' ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಸಚಿವರಾಗಿ ಮಂಗಳವಾರ ಅಧಿಕಾರ ವಹಿಸಿಕೊಂಡ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ತಂತ್ರಜ್ಞಾನ ಮತ್ತು ಡಿಜಿಟಲ್ ವ್ಯವಸ್ಥೆಗೆ ಉತ್ತೇಜನ ನೀಡುವ ಮೂಲಕ ಜನರ ಜೀವನಮಟ್ಟದ ಸುಧಾರಣೆಗೆ ಅನುಕೂಲಕರ ವಾತಾವರಣ ಕಲ್ಪಿಸಲಾಗುವುದು' ಎಂದರು.

ಜಾಮಿಯಾ ಮಸೀದಿ-ಮೂಡಲ ಬಾಗಿಲು ಆಂಜನೇಯ ದೇವಸ್ಥಾನ ವಿವಾದ
ಬಜರಂಗ ಸೇನೆಯಿಂದ ಕೋರ್ಟ್‌ಗೆ ಮೊರೆ



ಮಂಡ್ಯ: ಶ್ರೀರಂಗಪಟ್ಟಣದ ಜಾಮಿಯಾ ಮಸೀದಿಯಾಗಿರುವ ಮೂಡಲ ಬಾಗಿಲು ಆಂಜನೇಯ ದೇವಸ್ಥಾನದ ವಿಚಾರವಾಗಿ ಬಜರಂಗ ಸೇನೆ ವತಿಯಿಂದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಉಚ್ಚ ನ್ಯಾಯಾಲಯಕ್ಕೆ ಸಲ್ಲಿಸಿದ್ದು, ಅರ್ಜಿಯ ವಿಚಾರಣೆಯನ್ನು ನ್ಯಾಯಾಲಯ ಕೈಗೆತ್ತಿಕೊಂಡಿದೆ ಎಂದು ಬಜರಂಗಸೇನೆ ರಾಜ್ಯಾಧ್ಯಕ್ಷ ಬಿ.ಮಂಜುನಾಥ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೂಡಲ ಬಾಗಿಲು ಆಂಜನೇಯ ಸ್ವಾಮಿ ದೇವಸ್ಥಾನದ ಸರ್ವೆ ಹಾಗೂ ಆರ್ಕಿಲಾಜಿಕಲ್ ಸರ್ವೆ ಆಫ್ ಇಂಡಿಯಾ ವ್ಯಾಪ್ತಿಗೆ ಒಳಪಡುವ ಮಸೀದಿ ಒಳಗೆ ಮದರಸ ನಡೆಸುತ್ತಾ ಅಲ್ಲೇ ವಿದ್ಯಾರ್ಥಿಗಳು ವಾಸ್ತವ್ಯ ಹೂಡಿದ್ದಾರೆ .ಇವರನ್ನು ತೆರವುಗೊಳಿಸುವಂತೆ ಉಚ್ಚ ನ್ಯಾಯಾಲಯದಲ್ಲಿ ಬಜರಂಗ ಸೇನೆ ವತಿಯಿಂದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದು ,ಈ ಅರ್ಜಿಯನ್ನು ನ್ಯಾಯಾಲಯ ಪುರಸ್ಕರಿಸಿದೆ ಎಂದರು .

ಈ ಅರ್ಜಿಯ ವಿಚಾರಣೆ ಜುಲೈ 11ರಂದು ನಿಗದಿಯಾಗಿದೆ. ಈ ವಿಚಾರದಲ್ಲಿ ಐತಿಹಾಸಿಕ ಪ್ರಮಾಧಕ್ಕೆ ನ್ಯಾಯ ಸಿಗುವ ನಂಬಿಕೆ ಇದೆ ಎಂದು ನುಡಿದರು. ಯಾವುದೇ ಪಾರಂಪರಿಕ ಕಟ್ಟಡಗಳಲ್ಲಿ ಹೊರಗಿನವರು ಉಳಿದುಕೊಳ್ಳಲು ಕಾನೂನಿನಡಿ ಅವಕಾಶವಿಲ್ಲ .ಆದರೂ ಸಹ ಅಕ್ರಮವಾಗಿ ಮದರಸ ನಡೆಸಲು ಅನುವು ಮಾಡಿಕೊಡಲಾಗಿದೆ. ಇಲ್ಲಿ ಪಾರಂಪರಿಕ ಕಟ್ಟಡ ಹಾಗೂ ದೇವಸ್ಥಾನದ ಕಂಬಗಳನ್ನು ವಿರೂಪ ಗೊಳಿಸಲಾಗುತ್ತಿದೆ. ಈ ಬಗ್ಗೆ ಅಧಿಕಾರಿಗಳು ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸರ್ಕಾರ ಪ್ರತಿ ತಿಂಗಳು ಜಾಮಿಯಾ ಮಸೀದಿ ನಿರ್ವಹಣೆ ಖರ್ಚಿಗಾಗಿ ಲಕ್ಷಾಂತರ ರೂಪಾಯಿ ನೀಡುತ್ತಿದೆ. ಇದರ ಲಾಭವನ್ನು ಮದರಸ ವಿದ್ಯಾರ್ಥಿಗಳು ಪಡೆಯುತ್ತಿದ್ದಾರೆ. ಆದ್ದರಿಂದ ಸರ್ಕಾರ ಇದರತ್ತ ಗಮನಹರಿಸಬೇಕೆಂದು ಆಗ್ರಹ ಪಡಿಸಿದರು .

ಸುದ್ದಿಗೋಷ್ಠಿಯಲ್ಲಿ ಬಜರಂಗ ಸೇನೆ ಜಿಲ್ಲಾಧ್ಯಕ್ಷ ವೈಎಚ್ ಹರ್ಷ ,ನಗರ ಘಟಕದ ಅಧ್ಯಕ್ಷ ಆರ್ ಚೇತನ್ ಕುಮಾರ್, ಜಿಲ್ಲಾ ಕಾರ್ಯದರ್ಶಿಗಳಾದ ಸತೀಶ್, ದೀಪಕ್ ಸೇರಿದಂತೆ ಇತರರಿದ್ದರು.

ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಅವರನ್ನು ವಿಚಾರಣೆ ಮಾಡುತ್ತಿದ್ದೇವೆ: ಬಿ.ದಯಾನಂದ್



ಬೆಂಗಳೂರು: ಕೊಲೆ ಪ್ರಕರಣವೊಂದಕ್ಕೆ ಸಂಬಂಧಪಟ್ಟಂತೆ ನಟ ದರ್ಶನ್ ಅವರನ್ನು ವಶಕ್ಕೆ ಪಡೆದುಕೊಂಡು ವಿಚಾರಣೆ ನಡೆಸಲಾಗಿದೆ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ಸ್ಪಷ್ಟಪಡಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಕನ್ನಡ ಚಿತ್ರರಂಗದ ನಟ ದರ್ಶನ್ ಹಾಗೂ ಆತನ ಸಹಚರರನ್ನು ಬಂಧಿಸಿ ಕೂಲಂಕುಷವಾಗಿ ವಿಚಾರಣೆಗೊಳಪಡಿಸಲಾಗುತ್ತಿದೆ. ಸದ್ಯಕ್ಕೆ ತನಿಖೆ ಪ್ರಗತಿಯಲ್ಲಿರುವುದರಿಂದ ಹೆಚ್ಚಿನ ಮಾಹಿತಿಯನ್ನು ನೀಡಲು ಸಾಧ್ಯವಿಲ್ಲ ಎಂದರು.

ಚಿತ್ರನಟನ ಪತ್ನಿಗೆ ಅಶ್ಲೀಲ ಸಂದೇಶ ಕಳುಹಿಸಿದ ಹಿನ್ನೆಲೆಯಲ್ಲಿ ಕೊಲೆಯಾಗಿದೆ ಎಂದು ಪ್ರಾಥಮಿಕ ಹಂತದ ಮಾಹಿತಿಯಲ್ಲಿ ತಿಳಿದುಬಂದಿದೆ. ಸುಮಾರು 10ಕ್ಕೂ ಹೆಚ್ಚು ಮಂದಿಯನ್ನು ವಶಕ್ಕೆ ತೆಗೆದುಕೊಂಡು ವಿಚಾರಣೆ ನಡೆಸಲಾಗುತ್ತಿದೆ. ಸದ್ಯದಲ್ಲಿ ದರ್ಶನ್‌ರನ್ನು ವಶಕ್ಕೆ ಪಡೆದುಕೊಂಡು ವಿಚಾರಣೆ ನಡೆಸಲಾಗಿದೆ. ಮುಂದಿನ ಹಂತದಲ್ಲಿ ಉಳಿದ ಪ್ರಕ್ರಿಯೆಗಳನ್ನು ಮುಂದುವರೆಸಲಾಗುವುದು ಎಂದು ಹೇಳಿದರು.

ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆಯಲ್ಲಿ ದಾಖಲಾದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಪೊಲೀಸರು ದರ್ಶನ್‌ರನ್ನು ವಶಕ್ಕೆ ಪಡೆದುಕೊಂಡಿದ್ದಾರೆ ಎಂದು ತಿಳಿಸಿದರು.

ಟಾರ್ಗೆಟ್ ತಲುಪಲು ಅಧಿಕಾರಿಗಳು ಶ್ರಮಿಸಬೇಕು: ಸಿದ್ದರಾಮಯ್ಯ

ಅಬಕಾರಿ ಪರವಾನಗಿಗಳ ನವೀಕರಣಕ್ಕೆ ಕಿರುಕುಳ ನೀಡಬಾರದು: ಸಿ.ಎಂ.ಸ್ಪಷ್ಟ ಸೂಚನೆ
ನೆರೆ ರಾಜ್ಯಗಳಿಂದ ಕರ್ನಾಟಕ ರಾಜ್ಯಕ್ಕೆ ಕಳ್ಳಸಾಗಾಣಿಕೆ ಮೂಲಕ ನುಸುಳುವ ಮದ್ಯವನ್ನು ತಡೆಗಟ್ಟಬೇಕು

ಕಾಯಕಯೋಗಿ ಸುದ್ದಿ

ಬೆಂಗಳೂರು: ಅಬಕಾರಿ ಪರವಾನಗಿಗಳ ನವೀಕರಣಕ್ಕೆ ಸನ್ನದುದಾರರಿಗೆ ಕಿರುಕುಳ ನೀಡಬಾರದು. ನೆರೆ ರಾಜ್ಯಗಳಿಂದ ಕರ್ನಾಟಕ ರಾಜ್ಯಕ್ಕೆ ಕಳ್ಳಸಾಗಾಣಿಕೆ ಮೂಲಕ ನುಸುಳುವ ಮದ್ಯವನ್ನು ಕಡ್ಡಾಯ ತಡೆಗಟ್ಟಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಬಕಾರಿ ಇಲಾಖಾ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದರು.

ಅಬಕಾರಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಈ ಸೂಚನೆ ನೀಡಿದರು.

ಇಲಾಖೆಯ ತೆರಿಗೆ ಸಂಗ್ರಹ ಸಾಮರ್ಥ್ಯವನ್ನು ಆಧರಿಸಿಯೇ ನಿಗದಿ ಪಡಿಸುವ ಗುರಿ ತಲುಪಲು ಅಧಿಕಾರಿಗಳು ಗರಿಷ್ಠ ಪ್ರಯತ್ನ ಮಾಡಬೇಕು ಎಂದು ಸೂಚಿಸಿದರು.



ಚುನಾವಣಾ ನೀತಿ ಸಂಹಿತೆ ಕಾರಣದಿಂದ ತೆರಿಗೆ ಸಂಗ್ರಹ ಬೆಳವಣಿಗೆ ದರ ನಿರೀಕ್ಷಿತ ಮಟ್ಟ ತಲುಪಿಲ್ಲ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಮುಂದಿನ ದಿನಗಳಲ್ಲಿ ಇದನ್ನು ಭರ್ತಿ ಮಾಡುವಂತೆ ಸಿಎಂ ಸೂಚಿಸಿದರು.

ಇಲಾಖೆಯಲ್ಲಿ ಕಾನ್ಸ್‌ಟೇಬಲ್, ಸಬ್ ಇನ್ಸ್‌ಪೆಕ್ಟರ್‌ಗಳ ನೇಮಕಾತಿ ಹಾಗೂ ವಾಹನಗಳ ಅಗತ್ಯತೆ ಕುರಿತಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಮುಖ್ಯಮಂತ್ರಿಗಳು ಸೂಚಿಸಿದರು.

ಕರ ಸಮಾಧಾನ ಯೋಜನೆಯಡಿ 5.10 ಕೋಟಿ ರೂ. ವಸೂಲಾಗಿದ್ದು, ಯೋಜನೆಯನ್ನು ಇನ್ನಷ್ಟು ಕಾಲ ವಿಸ್ತರಿಸುವಂತೆ ಅಧಿಕಾರಿಗಳು ಕೋರಿದರು.

ಅಬಕಾರಿ ಇಲಾಖೆಯ ವ್ಯವಹಾರಗಳನ್ನು ಸರಳಗೊಳಿಸುವ ನೂತನ ತಂತ್ರಾಂಶವನ್ನು ಲೋಕಾರ್ಪಣೆ ಮಾಡಿದರು. ಆನ್‌ಲೈನ್‌ನ

ಕಾಯಕಯೋಗಿ

12-06-2024
ಬುಧವಾರ

ಅನಧಿಕೃತ ಗೈರು ಹಾಜರಿಯಿಂದ ಕರ್ತವ್ಯ ಲೋಪ; ಸಮಜಾಯಿಷಿ ನೀಡಲು ನೌಕರರಿಗೆ ತಾಕೀತು

ಮಂಡ್ಯ: ಮಳವಳ್ಳಿ ಪುರಸಭೆಯ 4ನೇ ದರ್ಜೆ ನೌಕರ ಬಸವರಾಜು ಅವರು 2014 ಡಿಸೆಂಬರ್ 1 ರಿಂದ ಈವರೆಗೂ ಹಾಗೂ ಗ್ರೂಪ್ ಡಿ ನೌಕರ ಕೆ.ಆರ್ ಶೇಖರಕುಮಾರ ಅವರು 2023 ಡಿಸೆಂಬರ್ 3 ರಿಂದ ಅನಧಿಕೃತವಾಗಿ ಗೈರು ಹಾಜರಿಯಾಗುವ ಮೂಲಕ ಕರ್ತವ್ಯ ಲೋಪ ಮಾಡಿರುತ್ತಾರೆ.

ಅನಧಿಕೃತ ಗೈರುಹಾಜರಿ ಬಗ್ಗೆ ಸರ್ಕಾರಿ ಸುತ್ತೋಲೆ ರೀತ್ಯಾ ಕ್ರಮವಹಿಸುವುದರ ಜೊತೆಗೆ ಬಗ್ಗೆ ಸೂಕ್ತ ದಾಖಲಾತಿಗಳೊಂದಿಗೆ ಲಿಖಿತ ಸಮಜಾಯಿಷಿಯನ್ನು ನೀಡಲು ಸಾಕಷ್ಟು ಬಾರಿ ನೋಟಿಸ್ ಜಾರಿ ಮಾಡಿದ್ದರೂ ಕೂಡ ಈವರೆವಿಗೂ ಕಛೇರಿಯ ಕರ್ತವ್ಯಕ್ಕೆ ಹಾಜರಾಗಿ ತಮ್ಮ ಲಿಖಿತ ಸಮಜಾಯಿಷಿಯನ್ನು ನೀಡಿರುವುದಿಲ್ಲ. ತಾವುಗಳು ಕಚೇರಿಗೆ ಖುದ್ದು ಹಾಜರಾಗಿ ಲಿಖಿತ ಸಮಜಾಯಿಷಿಯನ್ನು ಸುದ್ದಿ ಪ್ರಕಟಣೆಗೊಂಡ 15 ದಿನಗಳೊಳಗಾಗಿ ನೀಡತಕ್ಕದ್ದು. ತಪ್ಪಿದ್ದಲ್ಲಿ ನಿಯಮಾವಳಿ ಪ್ರಕಾರ ನಿಯಮಾನುಸಾರ ಸರ್ಕಾರಿ ಸುತ್ತೋಲೆ ರೀತ್ಯಾ ಕ್ರಮವಹಿಸಲಾಗುವುದು ಎಂದು ಮಳವಳ್ಳಿ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕನ್ನಿಕಶಿಲ್ಪ ನವೋದಯ ಎಜುಕೇಷನ್ ಟ್ರಸ್ಟ್ ಮಂಡ್ಯ ಹಾಗೂ ಕನ್ನಿಕಶಿಲ್ಪ ನವೋದಯ ತರಬೇತಿ ಕೇಂದ್ರ ಇವರ ಆಶ್ರಯದಲ್ಲಿ ನಡೆದ 2023ನೇ ಸಾಲಿನ ಮಂಡ್ಯ ಜಿಲ್ಲಾ ಮಟ್ಟದ ಕನ್ನಿಕಶಿಲ್ಪ ಸಾಹಿತ್ಯ ಪ್ರಶಸ್ತಿ ವಿಜೇತ ಮಲ್ಲಿಕಾಮಳವಳ್ಳಿಯವರ 'ಕಾತ್ಯಾಯಿನಿ' ಕಾದಂಬರಿಗೆ ಹಾಗೂ ಕೆ.ಆರ್.ಪೇಟೆ ಬಲ್ಲೇನಹಳ್ಳಿ ಮಂಜುನಾಥ್ ಅವರ 'ಅಂತರಂಗದ ತಲ್ಲಣ' ಲೇಖನಗಳ ಸಂಗ್ರಹಕ್ಕೆ ಪ್ರಶಸ್ತಿ ಲಭಿಸಿದೆ.

ಸಚಿವರ ವಿರುದ್ಧ ಸುಳ್ಳು ಆರೋಪ: ಖಂಡನೆ

ಮಂಡ್ಯ: ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅವರ ವಿರುದ್ಧ ಸುಳ್ಳು ಆರೋಪ ಮಾಡುತ್ತಿರುವ ಮಾಜಿ ಶಾಸಕ ಸುರೇಶ್‌ಗೌಡ ಅವರ ವರ್ತನೆಯನ್ನು ಕಾಂಗ್ರೆಸ್ ಮುಖಂಡ ಶಿವನಂಜು ತೀವ್ರವಾಗಿ ಖಂಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಅವರ ಇಡೀ ಮಂಡ್ಯ ಜಿಲ್ಲೆಯಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿದ್ದಾರೆ. ಅದೇ ರೀತಿ ನಾಗಮಂಗಲದಲ್ಲಿಯೂ ಅಬಿವೃದ್ಧಿ ಕೆಲಸಗಳನ್ನು ಮಾಡುತ್ತಿದ್ದಾರೆ. ಆದರೆ ಇದನ್ನು ಸಹಿಸದೇ ಮಾಜಿ ಶಾಸಕ ಸುರೇಶ್‌ಗೌಡ ಅವರು ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತಿದ್ದಾರೆ. ಸಚಿವರ ಬಗ್ಗೆ ಏಕವಚನದಲ್ಲಿ ಮಾತನಾಡುತ್ತಿರುವುದು ಸರಿಯಲ್ಲ. ನಮಗೂ ಕೂಡ ಮಾತನಾಡಲು ಗೊತ್ತಿದೆ. ಆದರೆ ಅದು ನಮ್ಮ ಸಂಸ್ಕೃತಿಯಲ್ಲ ಎಂದು ತಿಳಿಸಿದರು. ಹಾಸನ ಜಿಲ್ಲೆಯಂತೆ ಮಂಡ್ಯ ಜಿಲ್ಲೆ ಯಾವುದೇ ಅಭಿವೃದ್ಧಿ ಕಾಣಲಿಲ್ಲ ಎಂದು ದೂರಿದ ಅವರು, ಎಚ್.ಡಿ.ಕುಮಾರಸ್ವಾಮಿ ಅವರು ಬಿ.ಫಾರಂಗಾಗಿ ದೆಹಲಿಗೆ ಹಲವಾರು ಬಾರಿ ಭೇಟಿ ನೀಡಿದ್ದರು. ಒಮ್ಮೆಯಾದರೂ ಬರ ಪರಿಹಾರದ ಹಣ ಬಿಡುಗಡೆ, ಮೇಕೆದಾಟು ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಬಗ್ಗೆ ಪ್ರಸ್ತಾಪ ಮಾಡಿಲ್ಲ ಎಂದು ದೂರಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆ-02 ಕ್ಕೆ ಜಿಲ್ಲೆಯಲ್ಲಿ 5827 ವಿದ್ಯಾರ್ಥಿಗಳು ನೋಂದಣಿ:ಡಾ ಕುಮಾರ

ಕಾಯಕಯೋಗಿ ಸುದ್ದಿ

ಮಂಡ್ಯ: ಜಿಲ್ಲೆಯಲ್ಲಿ ಜೂನ್ 14 ರಿಂದ 22 ರವರೆಗೆ ಎಸ್ ಎಸ್ ಎಲ್ ಸಿ ಪರೀಕ್ಷೆ-2 ನಡೆಯಲಿದ್ದು ಒಟ್ಟು 5827 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ಹೆಸರು ನೋಂದಯಿಸಿಕೊಂಡಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ಹೇಳಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ 2ನೇ ಹಂತದ ಎಸ್ ಎಸ್ ಎಲ್ ಸಿ ಪರೀಕ್ಷೆ ನಡೆಸುವುದರ ಸಂಬಂಧ ಸಭೆ ನಡೆಸಿ ಮಾತನಾಡಿದರು.

ಜಿಲ್ಲೆಯಲ್ಲಿ 3939 ಗಂಡು, ಹೆಣ್ಣು-1888 ಒಟ್ಟು 5827 ವಿದ್ಯಾರ್ಥಿಗಳು ಪರೀಕ್ಷೆ ಬರೆಯುವುದಕ್ಕೆ ನೋಂದಣಿಯಾಗಿದ್ದು ಅದರಲ್ಲಿ ಕೆ.ಆರ್. ಪೇಟೆ ತಾಲ್ಲೂಕಿನಲ್ಲಿ ಗಂಡು-661, ಹೆಣ್ಣು-244 ಒಟ್ಟು 905, ಮದ್ದೂರು ತಾಲ್ಲೂಕಿನಲ್ಲಿ ಗಂಡು-808, ಹೆಣ್ಣು-368, ಒಟ್ಟು 1176, ಮಳವಳ್ಳಿ ತಾಲ್ಲೂಕಿನಲ್ಲಿ ಗಂಡು-722, ಹೆಣ್ಣು-501, ಒಟ್ಟು 1223, ಮಂಡ್ಯ ದಕ್ಷಿಣ ವಲಯ ಗಂಡು-450, ಹೆಣ್ಣು-213, ಒಟ್ಟು 663, ಮಂಡ್ಯ ಉತ್ತರ ವಲಯ ಗಂಡು-124, ಹೆಣ್ಣು-56, ಒಟ್ಟು 180, ನಾಗಮಂಗಲ ಗಂಡು-422, ಹೆಣ್ಣು-174, ಒಟ್ಟು 596, ಪಾಂಡವಪುರ ಗಂಡು 426, ಹೆಣ್ಣು-198, ಒಟ್ಟು 624 ಶ್ರೀರಂಗಪಟ್ಟಣ ಗಂಡು 326, ಹೆಣ್ಣು-134, ಒಟ್ಟು 460, ವಿದ್ಯಾರ್ಥಿಗಳು ಪರೀಕ್ಷೆ ಬರೆಯುವುದಕ್ಕೆ ನೋಂದಣಿಯಾಗಿದ್ದಾರೆ.



ಪರೀಕ್ಷೆಗಾಗಿ 19 ಪ್ರೌಢಶಾಲೆಗಳನ್ನು ಪರೀಕ್ಷಾ ಕೇಂದ್ರಗಳನ್ನಾಗಿ ಗುರುತಿಸಿ ಪರೀಕ್ಷಾ ಮಂಡಳಿಗೆ ಮಾಹಿತಿ ಸಲ್ಲಿಸಲಾಗಿದೆ. ಎಲ್ಲಾ 19 ಪರೀಕ್ಷಾ ಕೇಂದ್ರಗಳಿಗೂ ಓರ್ವ ಪ್ರೌಢಶಾಲಾ ಮುಖ್ಯ ಶಿಕ್ಷಕರನ್ನು ಮುಖ್ಯ ಅಧೀಕ್ಷಕರನ್ನಾಗಿ ನೇಮಕ ಮಾಡಿಕೊಳ್ಳಲಾಗಿದೆ. 350 ಹಾಗೂ ಹೆಚ್ಚಿನ ವಿದ್ಯಾರ್ಥಿಗಳು ಪರೀಕ್ಷೆ ಬರೆಯುವ ಪರೀಕ್ಷಾ ಕೇಂದ್ರಗಳಿಗೆ ಓರ್ವ ಉಪ ಮುಖ್ಯ ಅಧೀಕ್ಷಕರನ್ನು ನೇಮಕ ಮಾಡಲಾಗಿದೆ ಎಂದರು.

ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸಿ.ಸಿ.ಟಿ.ವಿ ಗಳನ್ನು ಅಳವಡಿಸಲಾಗಿದೆ. ಪ್ರಶ್ನೆಪತ್ರಿಕೆಗಳನ್ನು ಪರೀಕ್ಷಾ ದಿನದಂದು ಪರೀಕ್ಷಾ ಕೇಂದ್ರಗಳಿಗೆ ತಲುಪಿಸಲು ಮಾರ್ಗಾಧಿಕಾರಿಗಳನ್ನು ಹಾಗೂ ಪ್ರತಿ ಬ್ಲಾಕ್ ಗಳಿಗೆ ಓರ್ವ ಬ್ಲಾಕ್ ಎಸ್.ಎಸ್. ಎಲ್.ಸಿ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ಪರೀಕ್ಷೆಯು ನಡೆಯುವ ದಿನಗಳಂದು ಪರೀಕ್ಷಾ ಕೇಂದ್ರಗಳ ಸುತ್ತಲೂ 200ಮೀ ಸುತ್ತಳತೆಯಲ್ಲಿ 144ನೇ ಕಲಂ ಜಾರಿಗೊಳಿಸಬೇಕು ಮತ್ತು ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ ಜೆ-ರಾಕ್ಸ್ ಅಂಗಡಿಗಳನ್ನು ಮುಚ್ಚಿಸಬೇಕು ಎಂದರು.

ಜಿಲ್ಲೆಯಲ್ಲಿ ಯಾವುದೇ ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಪರೀಕ್ಷಾ ಕೇಂದ್ರಗಳು ಇರುವುದಿಲ್ಲ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಗಳನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯ, ಸೂಕ್ತ ಆಸನ ವ್ಯವಸ್ಥೆ ಹಾಗೂ ಕುಡಿಯುವ ನೀರಿನ ಸೌಲಭ್ಯವನ್ನು ಕಲ್ಪಿಸಬೇಕು ಎಂದರು.

ಬ್ಲಾಕ್ ಹಂತದಲ್ಲಿ ಎಲ್ಲಾ ಪರೀಕ್ಷ ಕೇಂದ್ರಗಳಿಗೆ ಕೊಠಡಿ ಮೇಲ್ವಿಚಾರಕರನ್ನು ನೇಮಕ ಮಾಡಿಕೊಳ್ಳಲಾಗಿದೆ. ಪ್ರತಿ ಪರೀಕ್ಷಾ ಕೇಂದ್ರಗಳಿಗೆ ಸ್ಥಾನಿಕ ಜಾಗೃತ ದಳ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಪರೀಕ್ಷಾ ಕೇಂದ್ರಗಳಿಗೆ ಓರ್ವ ಮೊಬೈಲ್ ಸ್ಕ್ವಾಡೀನಾಧಿಕಾರಿಗಳನ್ನು ಕ್ಷೇತ್ರಶಿಕ್ಷಣಾಧಿಕಾರಿಗಳ ಹಂತದಲ್ಲಿ ನೇಮಕ ಮಾಡಿಕೊಳ್ಳಲು ಸೂಚಿಸಲಾಗಿದೆ ಎಂದರು.

ಮಳೆಗಾಲ ಶುರುವಾಗಿರುವುದರಿಂದ ಪರೀಕ್ಷೆ ಕೊಠಡಿಗಳಲ್ಲಿ ನೀರು ಸೋರಿಕೆ ಇದ್ದರೆ ಈಗಲೇ ಅದನ್ನು ಸರಿಪಡಿಸಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ನೋಡಿಕೊಳ್ಳಿ ಎಂದರು.

ಸಭೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಚ್ ಶಿವರಾಮೇಗೌಡ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಕೆ ಮೋಹನ್, ಬಿ.ಇ.ಒ ಮಹದೇವ, ಚಂದ್ರಶೇಖರ್, ಸೌಭಾಗ್ಯ, ಶಿಕ್ಷಣಾಧಿಕಾರಿ ಚಂದ್ರಕಾಂತ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಮಿಮ್ಸ್ ವತಿಯಿಂದ ಅತಿ ಹೆಚ್ಚು ರಕ್ತದಾನ ಮಾಡಿರುವ ರಕ್ತದಾನಿಗಳಿಗೆ ಸನ್ಮಾನ

ಮಂಡ್ಯ: ಮಂಡ್ಯ ಮಿಮ್ಸ್ ಮತ್ತು ಜಿಲ್ಲಾ ಏಡ್ಸ್ ನಿಯಂತ್ರಣಾ ಮತ್ತು ಪ್ರತಿಬಂಧಕ ಘಟಕ ಇವರ ಸಂಯುಕ್ತಾಶ್ರಯದಲ್ಲಿ ಜೂನ್ 14 ರಂದು ವಿಶ್ವ ರಕ್ತದಾನಿಗಳ ದಿನಾಚರಣೆ ಪ್ರಯುಕ್ತ ಜಿಲ್ಲೆಯ ರಕ್ತದಾನಿಗಳು ಅವರ ಜೀವನ ಅವಧಿಯಲ್ಲಿ ಅತಿ ಹೆಚ್ಚು ಬಾರಿ ರಕ್ತದಾನ ಮಾಡಿರುವ ಸಹೃದಯಿ ರಕ್ತದಾನಿಗಳನ್ನು ಗುರುತಿಸಿ ಸನ್ಮಾನಿಸಿ ಪ್ರೋತ್ಸಾಯಿಸುವ ಉದ್ದೇಶದಿಂದ ಅತಿ ಹೆಚ್ಚು ರಕ್ತದಾನ ಮಾಡಿರುವ ರಕ್ತದಾನಿಗಳು ಸೂಕ್ತ ದಾಖಲಾತಿಗಳೊಂದಿಗೆ ಜೂನ್ 17 ರಂದು ಸಂಜೆ 5 ಗಂಟೆ ಒಳಗೆ ಅರ್ಜಿಯನ್ನು ಮಿಮ್ಸ್ ರಕ್ತನಿಧಿ ವೈದ್ಯಾಧಿಕಾರಿಗಳಿಗೆ ಸಲ್ಲಿಸತಕ್ಕದ್ದು.

ಆಯ್ಕೆಯ ಮಾನದಂಡವು ಅತಿ ಹೆಚ್ಚು ರಕ್ತದಾನ ಮಾಡಿರುವವರು ಮತ್ತು ಈ ಮೊದಲು ಯಾವುದೇ ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಸನ್ಮಾನಕ್ಕೆ ಒಳಗಾಗಿರಬಾರದು ಹೆಚ್ಚಿನ ಮಾಹಿತಿಗಾಗಿ ಮಂಡ್ಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮನ್ಮುಲ್ ನಿರ್ದೇಶಕರ ವಿರುದ್ಧ ಕಾಂಗ್ರೆಸ್ ಷಡ್ಯಂತ್ರ: ಬಿಜೆಪಿ ಪ್ರತಿಭಟನೆ



ಕಾಯಕಯೋಗಿ ಸುದ್ದಿ

ಮಂಡ್ಯ: ಮನ್ಮುಲ್ ನಿರ್ದೇಶಕಿ ರೂಪ ವಿರುದ್ಧ ಮಂಡ್ಯ ಜಿಲ್ಲಾ ಸಹಕಾರ ಯೂನಿಯನ್ ಸಹಾಯಕ ಉಪ ನಿಬಂಧಕರ ಜೊತೆಗೂಡಿ ಕಾಂಗ್ರೆಸ್ ನಾಯಕರು ಷಡ್ಯಂತ್ರ ರೂಪಿಸಿ ನಿರ್ದೇಶಕ ಸ್ಥಾನದಿಂದ ವಜಾಗೊಳಿಸಲು ಮುಂದಾಗಿದೆ ಎಂದು ಆರೋಪಿಸಿ ಮಂಡ್ಯದಲ್ಲಿ ಬಿಜೆಪಿ ಪಕ್ಷದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರದ ಜಿಲ್ಲಾ ಸಹಕಾರ ಒಕ್ಕೂಟದ ಕಚೇರಿ ಎದುರು ಪಕ್ಷದ ಕಾರ್ಯಕರ್ತರು ಪ್ರತಿಭಟಿಸಿ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚೆಲುವರಾಯಸ್ವಾಮಿ ಹಾಗೂ ಒಕ್ಕೂಟದ ಸಹಾಯಕ ಉಪ ನಿಬಂಧಕಿ ಎ ಆರ್ ಅನಿತಾ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿ ಆಕ್ರೋಶಿಸಿದರು.

ಮಂಡ್ಯ ಜಿಲ್ಲಾ ಹಾಲು ಒಕ್ಕೂಟದ ನಿರ್ದೇಶಕರ ಸ್ಥಾನಕ್ಕೆ ಮದ್ದೂರು ತಾಲೂಕಿನಿಂದ ಬಿಜೆಪಿ ಪಕ್ಷದಿಂದ ರೂಪ ಆಯ್ಕೆಯಾಗಿದ್ದು, ಆದರೆ ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಪಕ್ಷ ಅವರಿಗೆ ರಾಜಕೀಯವಾಗಿ ಕಿರುಕುಳ ನೀಡುತ್ತಿದೆ, ಸ್ಥಳೀಯ ಶಾಸಕರು ಹಾಗೂ ಸಚಿವರು ಷಡ್ಯಂತ್ರ ರೂಪಿಸಿ ನಿರ್ದೇಶಕ ಸ್ಥಾನದಿಂದ ವಜಾಗೊಳಿಸಲು ಮುಂದಾಗಿದ್ದಾರೆ ಎಂದು ಆರೋಪಿಸಿದರು. ಕಾಂಗ್ರೆಸ್ ನಾಯಕರ ಜೊತೆಗೂಡಿರುವ ಸಹಕಾರ ಒಕ್ಕೂಟದ ಸಹಾಯಕ ಉಪನಿಬಂಧಕಿ ಎ ಆರ್ ಅನಿತಾ ಏಕ ಪಕ್ಷೀಯವಾಗಿ ವರ್ತಿಸುತ್ತಿದ್ದಾರೆ, ನಿರ್ದೇಶಕಿ ರೂಪ ರವರ ವಕಾಲತ್ತು ಸ್ವೀಕಾರ ಮಾಡಿಲ್ಲ, ಬದಲಾಗಿ ರಾಜಕೀಯ ಪ್ರಭಾವಕ್ಕೆ ಒಳಗಾಗಿದ್ದಾರೆ, ಈಗಾಗಲೇ ಸುಪ್ರೀಂ ಕೋರ್ಟ್ ನಲ್ಲಿ ವಕಾಲತ್ತು ಇದ್ದರೂ ಸಹ ನಿರ್ದೇಶಕ ಸ್ಥಾನದಿಂದ ವಜಾಗೊಳಿಸಲು ಪಿತೂರಿ ನಡೆಸಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಮಂಡ್ಯ ಜಿಲ್ಲಾ ಹಾಲು ಒಕ್ಕೂಟದ ನಿರ್ದೇಶಕರ ಸ್ಥಾನದಿಂದ ರೂಪಾರನ್ನು ವಜಾ ಮಾಡಬಾರದು, ರಾಜಕೀಯ ಪ್ರಭಾವಕ್ಕೆ ಒಳಗಾಗಿ ಏಕ ಪಕ್ಷೀಯವಾಗಿ ವರ್ತಿಸುತ್ತಿರುವ ಜಿಲ್ಲಾ ಸಹಕಾರ ಒಕ್ಕೂಟದ ಸಹಾಯಕ ಉಪ ನಿಬಂಧಕಿ ಎ ಆರ್ ಅನಿತಾ ರನ್ನು ಸೇವೆಯಿಂದ ವಜಾ ಗೊಳಿಸಬೇಕು ಎಂದು ಒತ್ತಾಯಿಸಿದರು .ಬಿಜೆಪಿ ಮುಖಂಡ ಅಶೋಕ್ ಜಯರಾಮ್ ನೇತೃತ್ವವಹಿಸಿದ್ದರು.



ಮೋದಿ ಮೂರನೇ ಬಾರಿ ಪ್ರಮಾಣವಚನ: ಜೆಡಿಎಸ್ ಕಾರ್ಯಕರ್ತರ ಸಂಭ್ರಮ

ಕಾಯಕಯೋಗಿ ಸುದ್ದಿ

ಮದ್ದೂರು: ಪ್ರಧಾನಿಯಾಗಿ ನರೇಂದ್ರ ಮೋದಿಯವರು ಮೂರನೇ ಬಾರಿಗೆ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲೇ ಜೆಡಿಎಸ್ ಕಾರ್ಯಕರ್ತರು. ಎಳನೀರು ವ್ಯಾಪಾರಿಗಳು ಹಾಗೂ ಆಮಾಲಿಗಳು ಪಟಾಕಿ ಸಿಡಿಸಿ ಸಿಹಿ ವಿತರಿಸಿ ಸಂಭ್ರಮಿಸಿದರು.

ಪಟ್ಟಣದ ಎಳೆನೀರು ಮಾರುಕಟ್ಟೆ ಮುಂಭಾಗ ಉಮೇಶ್ ಅವರ ನೇತೃತ್ವದಲ್ಲಿ ಮೈಸೂರು ಬೆಂಗಳೂರು ಹೆದ್ದಾರಿಯಲ್ಲಿ ಜಮಾಯಿಸಿದ ಜೆಡಿಎಸ್ ಕಾರ್ಯಕರ್ತರು ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅಭಿಮಾನಿಗಳು. ಎಳನೀರು ವ್ಯಾಪಾರಿಗಳು ಪಟಾಕಿ ಸಿಡಿಸಿ ಸಿಹಿ ಹಂಚಿ ಘೋಷಣೆಗಳನ್ನು ಕೂಗಿ ಹರ್ಷ ವ್ಯಕ್ತಪಡಿಸಿದರು.

ಜೆಡಿಎಸ್ ಮುಖಂಡ ಎಳನೀರು ವ್ಯಾಪಾರಿ ಉಮೇಶ್ ಮಾತನಾಡಿ, ಕೇಂದ್ರದಲ್ಲಿ ನರೇಂದ್ರ ಮೋದಿ ಅವರು ಮೂರನೇ ಬಾರಿ ಪ್ರಧಾನಮಂತ್ರಿಯಾಗಿ ಆಯ್ಕೆಯಾಗಿರುವುದು. ಹಾಗೂ ರಾಜ್ಯದಿಂದ. ಮಂಡ್ಯದಿಂದಲೇ ಆಯ್ಕೆಯಾದ ಅತಿ ಹೆಚ್ಚು ಬಹುಮತದಿಂದ ಜಯಗಳಿಸಿರುವ ಎಚ್ ಡಿ ಕುಮಾರಸ್ವಾಮಿ ಅವರಿಗೆ ಕ್ಯಾಬಿನೆಟ್ ಸಚಿವರಾಗಿ ಆಯ್ಕೆ ಮಾಡಿರುವುದು ಸಂತೋಷ. ಮೋದಿಜಿಯವರ ಅವರ ಆಡಳಿತ ಅವಧಿಯಲ್ಲಿ ಮಾಡಿರುವ ಜನಪರ ಕೆಲಸಗಳಿಗೆ ದೇಶದ ಜನರು ಮನ್ನಣೆ ನೀಡಿ ಬಿಜೆಪಿ ಆಡಳಿತಕ್ಕೆ. ದೇಶವಲ್ಲದೆ ವಿದೇಶದಲ್ಲೂ ಮೋದಿ ಅವರ ವರ್ಚಸ್ಸು ಇನ್ನಷ್ಟು ಹೆಚ್ಚಾಗಿದೆ ಎಂದರು.

ಈ ಸಂದರ್ಭದಲ್ಲಿ ಶಿವಣ್ಣ, ಯೋಗೇಶ. ಶಿವಕುಮಾರ್. ಸುನಿಲ್. ಕೃಷ್ಣ.ಸುನಿಲ್.ವೆಂಕಟೇಶ್. ಎಳನೀರು ಮಾರುಕಟ್ಟೆ ವ್ಯಾಪಾರಿಗಳು ಹಮಾಲಿಗಳು ಹಾಜರಿದ್ದರು.

ವಿಸಿ ನಾಲೆಗಳಲ್ಲಿ ಹೂಳು ತೆಗೆಸುವಂತೆ ವಿವಿಧ ಗ್ರಾಮದ ರೈತರು ಪ್ರತಿಭಟನೆ

ಕಾಯಕಯೋಗಿ ಸುದ್ದಿ

ಭಾರತೀನಗರ: ವಿಸಿ ನಾಲೆಗಳಲ್ಲಿ ಹೂಳು ತೆಗೆಸಿ ರೈತರಿಗೆ ಸಮರ್ಪಕ ನೀರು ಪೂರೈಸುವಂತೆ ಆಗ್ರಹಿಸಿ ಕಾವೇರಿ ನೀರಾವರಿ ನಿಗಮದ ಕಛೇರಿ ಎದುರು ವಿವಿಧ ಗ್ರಾಮದ ಮುಖಂಡರು ಪ್ರತಿಭಟನೆ ನಡೆಸಿದರು.

ಭಾರತೀನಗರದ ಕಾವೇರಿ ನೀರಾವರಿ ನಿಗಮದ ಕಛೇರಿ ಎದುರು ಕ್ಯಾತಘಟ್ಟ, ಅಣ್ಣೂರು, ಚಿಕ್ಕರಸಿನಕೆರೆ ಗ್ರಾ.ಪಂ ವ್ಯಾಪ್ತಿಯ ರೈತರು ಜಮಾಯಿಸಿ ಅಧಿಕಾರಿಗಳ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಮುಟ್ಟನಹಳ್ಳಿ ಬಳಿಯ ಸೂಳೆಕೆರೆಯಿಂದ ನಿರ್ಮಿಸಲಾಗಿರುವ ಉತ್ತರ ಮತ್ತು ದಕ್ಷಿಣ ನಾಲೆಗಳಲ್ಲಿ ಹೂಳು ತುಂಬಿಕೊಂಡಿದ್ದು, ಹೂಳು ತೆಗೆಯಿಸುವಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆಂದು ಆರೋಪಿಸಿ ಹಲವು ಗ್ರಾಮಪಂಚಾಯಿತಿಗಳ ರೈತರು ಪ್ರತಿಭಟಿಸಿದರು.

ಸೂಳೆಕೆರೆಯ ಉತ್ತರ ಮತ್ತು ದಕ್ಷಿಣ ನಾಲೆಗಳಲ್ಲಿ ಹೂಳು ತುಂಬಿಕೊಂಡು ಸರಾಗವಾಗಿ ನೀರು ಹರಿಯುತ್ತಿಲ್ಲವೆಂದು ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದು ಹೂಳು ತೆಗೆಯಿಸುವಂತೆ ಮನವಿ



ಮಾಡಿದ್ದರೂ ಕೂಡ ನಿರ್ಲಕ್ಷಿಸಿದ್ದಾರೆ ಎಂದು ರೈತರು ಆರೋಪಿಸಿದರು.

ಸೂಳೆಕೆರೆ ನಾಲೆಯಲ್ಲಿ ನೀರು ಬಿಡದೆ ಕೆರೆಗೆ ಬರುವ ನೀರನ್ನು ಹೆಬ್ಬಳ್ಳ ಚೆನ್ನಯ್ಯ ನಾಲೆಗೆ ಹರಿಯಬಿಟ್ಟಿದ್ದು, ಕೆರೆಯಲ್ಲಿ ನೀರು ಶೇಖರಣೆ ಮಾಡುವಲ್ಲಿ ಅಧಿಕಾರಿಗಳು ಬೇಜಾವಾಬ್ದಾರಿ ಪ್ರದರ್ಶಿಸಿದ್ದಾರೆ. ನಾಲೆಯಲ್ಲಿ ಹೂಳು ತೆಗೆಯಿಸಿದರೆ ನೀರು ಬಿಡಬೇಕಾಗುತ್ತದೆ ಎನ್ನುವ ಕಾರಣಕ್ಕೆ ಹೂಳು ತೆಗೆಯಿಸುತ್ತಿಲ್ಲ. ಇದರಿಂದಾಗಿ ಪ್ರಾಣಿ, ಪಕ್ಷಿಗಳಿಗೆ ಕುಡಿಯುವ ನೀರಿಗೂ ತತ್ವಾರ ಎದುರಾಗಿದೆ. ರೈತರು ಸೂಳೆಕೆರೆ ಅಚ್ಚುಕಟ್ಟು ಪ್ರದೇಶದಲ್ಲಿ ಬೆಳೆದಿರುವ ಬೆಳ

ಹನೂರು :ಗುಂಡಿ ಬಿದ್ದಿರುವ ರಸ್ತೆಯನ್ನು ತೋಮಿರಪಾಳ್ಯ ಮೂಲದ ಇಬ್ಬರು ಸ್ವಂತ ಖರ್ಚಿನಿಂದ ಗುಂಡಿ ಮುಚ್ಚುವ ಕೆಲಸ ಮಾಡುತ್ತಿರುವ ಘಟನೆ ಹನೂರು ತಾಲ್ಲೂಕಿನ ಬಂಡಳ್ಳಿ ಮುಖ್ಯರಸ್ತೆಯಲ್ಲಿ ಜರುಗಿದೆ ಹನೂರಿನಿಂದ ಬಂಡಳ್ಳಿಗೆ ತೆರಳುವ ಮುಖ್ಯ ರಸ್ತೆ ಗುಂಡಿಮಯವಾಗಿದ್ದು, ಪ್ರತಿ ನಿತ್ಯ ಸಾವಿರಾರು ವಾಹನಗಳು ಈ ಮಾರ್ಗವಾಗಿ ಸಂಚಾರ ಮಾಡುತ್ತಿವೆ.




ರೈತರು, ಶಾಲಾ ಕಾಲೇಜು ವಿದ್ಯಾರ್ಥಿಗಳು ಬಸ್ ನಲ್ಲಿ ಸಂಚಾರ ಮಾಡುವಾಗ ಗುಂಡಿಮಯ ರಸ್ತೆಯಲ್ಲಿ ಅನಾಹುತ ಸಂಭವಿಸಬಹುದಾಗಿದೆ. ಈ ಬಗ್ಗೆ ಹಲವಾರು ಭಾರಿ ಸಾರ್ವಜನಿಕರು ಜಿಲ್ಲಾಡಳಿತ, ಸರ್ಕಾರ ಮತ್ತು ಶಾಸಕರು ಸೇರಿದಂತೆ ಅಧಿಕಾರಿಗಳಿಗೆ ರಸ್ತೆ ದುರಸ್ಥಿಗೊಳಿಸುವಂತೆ ಮನವಿ ಮಾಡಿದರು ಪ್ರಯೋಜನವಾಗಿಲ್ಲ. ಸರ್ಕಾರದ ನಡೆಯಿಂದ ಬೇಸತ್ತ ತೋಮಿಯರ್ ಪಾಳ್ಯ ಗ್ರಾಮದ ಮಹಿಮಾ ದಾಸ್ ಹಾಗೂ ರಾಜು ರವರುಗಳು ಸ್ವಂತ ಖರ್ಚಿನಿಂದಲೇ ಜೆಸಿಬಿ ಮೂಲಕ ರಸ್ತೆಯಲ್ಲಿನ ಗುಂಡಿಗಳಿಗೆ ಮಣ್ಣು ಹಾಕಿಸಲು ಮುಂದಾಗಿದ್ದಾರೆ

ಪರಿಸರ ಜಾಗೃತಿ ಒಂದು ದಿನಕ್ಕೆ ಸೀಮಿತವಾಗದಿರಲಿ

ಕನಕಪುರ: ಪರಿಸರ ಜಾಗೃತಿ ಹಾಗೂ ಉಳಿವು ಕೇವಲ ಒಂದು ದಿನಕ್ಕೆ ಸೀಮಿತವಾಗದೆ ಮನುಷ್ಯ ಪ್ರತಿನಿತ್ಯ ಆಚರಿಸಬೇಕಾದ ಕರ್ತವ್ಯವಾಗಬೇಕು ಎಂದು ರಾಮನಗರ ಜಿಲ್ಲಾ ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಕುಮಾರ್ ಹೆಚ್. ಎಸ್.ತಿಳಿಸಿದರು.

ನಗರದ ಆಯ್ಯಪ್ಪಸ್ವಾಮಿ ದೇವಾಲಯದ ಬಳ ನೂತನವಾಗಿ ನವ ನಿರ್ಮಾಣಗೊಳ್ಳುತ್ತಿರುವ ನ್ಯಾಯಾಲಯದ ಆವರಣದಲ್ಲಿ ಗಿಡಗಳನ್ನು ನೆಟ್ಟಿ ಮಾತನಾಡಿದ ಅವರು ಒಬ್ಬ ಮನುಷ್ಯನಿಗೆ ಪ್ರತಿನಿತ್ಯ 4 ಸಿಲಿಂಡರ್ ನಷ್ಟು ಆಮ್ಲಜನಕ ಅವಶ್ಯವಿದೆ.ಒಬ್ಬ ವ್ಯಕ್ತಿ ಆರೋಗ್ಯವಂತ ಜೀವನ ನಡೆಸಲು ಆಮ್ಲಜನಕ ಎಷ್ಟು ಮುಖ್ಯ ಎಂಬುದನ್ನು ಕಳೆದ ಎರಡು ವರ್ಷಗಳ ಹಿಂದಿನ ಕೋವಿಡ್ ಸಮಯದಲ್ಲಿ ತಿಳಿದು ಬಂದಿದ್ದು ನಮ್ಮ ಕಣ್ಣುಗಳ ಮುಂದಿದೆ. ಉಚಿತವಾಗಿ ನಮಗೆ ಆಮ್ಲಜನಕವನ್ನು ನೀಡುತ್ತಾ ಬರುತ್ತಿರುವ ಮರ-ಗಿಡಗಳನ್ನು ಬೆಳಸಿ ಪೋಷಿಸಿಸಬೇಕಾದ ಜವಬ್ದಾರಿ ಪ್ರತಿಯೊಬ್ಬ ನಾಗರೀಕರ ಕರ್ತವ್ಯ ಎಂದರು. ಈ ಸಂದರ್ಭದಲ್ಲಿ ಕೆ.ಎ.ನಾಗೇಶ, ಅಣ್ಣಪ್ಪ ಆ ಸವದಿ, ರಾಧ, ಕ ಕನಕಪುರ ಆರಣ್ಯ ವಲಯದ ಗಣೇಶ್,ವಲಯ ಅರಣ್ಯಾಧಿಕಾರಿ ದಾಳೇಶ್, ಗಂಗಾಧರ, ಸಿದ್ಧಾರ್ಥ, ನಾರಾಯಣ್, ಸಾಗರ್, ಕಾಮೇಶ್, ಗೋಪಾಲಗೌಡ,ಮಂಜುನಾಥ ಇತರರು ಉಪಸ್ಥಿತರಿದ್ದರು.

ವಿದ್ಯುತ್ ಸ್ಪರ್ಶಿಸಿ ಮಹಿಳೆ ಸಾವು



ಕನಕಪುರ:ರೇಷ್ಮೆ ಹುಳು ಸಾಕಾಣಿಕೆ ಮನೆ ಸ್ವಚ್ಚ ಮಾಡಲು ಹೋದಾಗ ಮಹಿಳೆಗೆ ವಿದ್ಯುತ್ ಸ್ಪರ್ಶಿಸಿ ಸಾವನ್ನಪ್ಪಿರುವ ಘಟನೆ ಎಲವಳ್ಳಿ ಗ್ರಾಮದಲ್ಲಿ ನಡೆದಿದೆ.

ತಾಲೂಕಿನ ಸಾತನೂರು ಹೋಬಳಿಯ ಎಲವಳ್ಳಿ ಗ್ರಾಮದ ಎಲವಳ್ಳಿ ಗ್ರಾಮದ ಚನ್ನಪ್ಪ ಅವರ ಪತ್ನಿ ವಿಶಾಲಾಕ್ಷಿ (40) ಮೃತಪಟ್ಟಿರುವ ದುರ್ದೈವಿ ಎಂದು ಗುರುತಿಸಲಾಗಿದೆ.ಎಲವಳ್ಳಿ ಗ್ರಾಮದ ಅವರ ತೋಟ ದಲ್ಲಿರುವ ರೇಷ್ಮೆ ಮನೆಯಲ್ಲಿ ಭಾನುವಾರ ಈಘಟನೆ ಸಂಭವಿಸಿದೆ. ಕೃಷಿಕರಾಗಿದ್ದ ಇವರು ರೇಷ್ಮೆ ಹುಳು ಬೆಳೆ ಬೆಳೆದ ನಂತರ ರೇಷ್ಮೆ ಮನೆಯನ್ನು ಸ್ವಚ್ಚಗೊಳಿಸಲು ಮುಂದಾಗಿದ್ದರು ಭಾನುವಾರ ಮಧ್ಯಾಹ್ನ ರೇಷ್ಮೆ ಮನೆ ಸ್ವಚ್ಚಗೊಳಿಸಲು ಮೋಟಾರ್ ಆನ್ ಮಾಡುವಾಗ ವಿಶಾಲಾಕ್ಷಿ ಅವರಿಗೆ ವಿದ್ಯುತ್ ಶಾಕ್ ಹೊಡೆದಿದ್ದು ತಕ್ಷಣವೇ ಅವರನ್ನು ಕನಕಪುರ ಸಾರ್ವಜನಿಕ ಆಸ್ಪತ್ರೆಗೆ ಕರೆತರುವಷ್ಟರಲ್ಲಿ ಮೃತಪಟ್ಟಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಚಿಮುಂಗಾರು ಮಳೆಯ ಆರ್ಭಟಕ್ಕೆ ಹೈ ಅಲರ್ಟ್ ಆಗುವಂತೆ ಅಧಿಕಾರಿಗಳಿಗೆ ಶಾಸಕ ದರ್ಶನ್ ಧ್ರುವನಾರಾಯಣ್ ಸೂಚನೆ

ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ ನಡೆಸಿದ ಶಾಸಕ ದರ್ಶನ್ ಧ್ರುವನಾರಾಯಣ್

ಕಾಯಕಯೋಗಿ ಸುದ್ದಿ

ನಂಜನಗೂಡು: ಮುಂಬರುವ ದಿನಗಳಲ್ಲಿ ಹೆಚ್ಚು ಮಳೆ ಯಾಗುವ ನಿರೀಕ್ಷೆ ಇದೆ ಎಂದು ಹವಾಮಾನ ಇಲಾಖೆಗಳಿಂದ ವರದಿಯಾದ ಹಿನ್ನೆಲೆಯಲ್ಲಿ ನಂಜನಗೂಡು ನಗರದ ತಾಲ್ಲೂಕು ಆಡಳಿತ ಭವನದ ತಹಶೀಲ್ದಾರ್ ಕಛೇರಿಯಲ್ಲಿ ಶಾಸಕ ದರ್ಶನ್ ಧ್ರುವನಾರಾಯಣ್ ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆಯನ್ನು ನಡೆಸಿದರು.

ಈಗಾಗಲೇ ನಂಜನಗೂಡು ಪಟ್ಟಣ ಸೇರಿದಂತೆ ಗೋಳೂರು, ಕಪ್ಪಸೋಗೆ, ಕೂಡ್ಲಾಪುರ ಗ್ರಾಮಗಳಲ್ಲಿ ಕುಡಿಯುವ ನೀರಿನ ಪೈಪಿಗೆ ಒಳಚರಂಡಿಯ ಕೊಳಚೆ ನೀರು ಸೇರುತ್ತಿದೆ ಎಂಬ ಮಾಹಿತಿ ಸಾಕಷ್ಟು ಜನರು ತಿಳಿಸಿದ್ದಾರೆ. ಇಂತಹ ಸಮಸ್ಯೆಯಿಂದ ವರುಣ ಕ್ಷೇತ್ರದ ತಗಡೂರು ಗ್ರಾಮದಲ್ಲಿ ವಾಂತಿ ಭೇದಿ ಕಾಣಿಸಿಕೊಂಡು ಆತಂಕ ಸೃಷ್ಟಿ ಮಾಡಿತ್ತು. ಇಂತಹ ಘಟನೆ ಮರುಕಳಿಸದಂತೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಪಿಡಿಒಗಳು ಜಾಗೃತರಾಗಿ ಕಾರ್ಯನಿರ್ವಹಿಸಬೇಕು ಏನಾದ್ರೂ ಗ್ರಾಮಗಳಲ್ಲಿ ಸಮಸ್ಯೆ ಕಂಡು ಬಂದಲ್ಲಿ ಪಿಡಿಒಗಳೆ ನೇರ ಹೊಣೆಗಾರರಾಗಬೇಕಾಗುತ್ತದೆ ಎಂದು ಎಚ್ಚರಿಸಿದರು. ಮುಂಗಾರು ಮಳೆ ಹೆಚ್ಚು ಪ್ರಮಾಣದಲ್ಲಿ ಕಾಣಿಸಿಕೊಳ್ಳುತ್ತದೆ ಎಂಬ ಮಾಹಿತಿ ಈಗಾಗಲೇ ಅವಮಾನ ಇಲಾಖೆಯಿಂದ ಖಚಿತವಾಗಿದೆ ಪಟ್ಟಣ ಮತ್ತು ಗ್ರಾಮೀಣ ಪ್ರದೇಶಗಳ ತಗ್ಗು ಪ್ರದೇಶಗಳಲ್ಲಿ ವಾಸಿಸುವ ಕುಟುಂಬಗಳಿಗೆ ಬೇಕಾದ ಸೌಕರ್ಯ



ಮತ್ತು ಎಚ್ಚರಿಕೆ ಸಂದೇಶಗಳನ್ನು ನೀಡಬೇಕು. ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳಿಂದ ರೈತರಿಗೆ ತೊಂದರೆಯಾಗದಂತೆ ಕೃಷಿ ಉಪಕರಣ ಬಿತ್ತನೆ ಬೀಜ ರಸ ಗೊಬ್ಬರಗಳನ್ನು ಸರಬರಾಜು ಮಾಡಿಕೊಡಬೇಕು. ಹಾಗೆಯೇ ಗ್ರಾಮೀಣ ಪ್ರದೇಶಗಳಲ್ಲಿ ಮಳೆಗಾಲದ ಸಂದರ್ಭದಲ್ಲಿ ವಿದ್ಯುತ್ ಕಣ್ಣಮುಚ್ಚಾಲೆ ಹೆಚ್ಚಾಗುತ್ತದೆ. ಅದರ ಬಗ್ಗೆ ಅಧಿಕಾರಿಗಳು ನಿಗ ವಹಿಸಬೇಕು. ನಂಜನಗೂಡು ಪಟ್ಟಣದ ಶ್ರೀರಾಂಪುರ ಬಡಾವಣೆಯೊಂದರಲ್ಲಿ ಒಳ ಚರಂಡಿಯ ಕೊಳಚೆ ನೀರು ನೇರವಾಗಿ ನಾಲೆಗೆ ಸೇರುತ್ತಿದೆ ಇದನ್ನು ತಡೆಯಲು ಏನೆಲ್ಲಾ ಕ್ರಮ ಕೈಗೊಳ್ಳಬೇಕು ಎಂದು ನಗರಸಭಾ ಸಹಾಯಕ ಕಾರ್ಯ ಪಾಲಕ ಎಂಜಿನಿಯರ್ ಮಹೇಶ್ ಗೆ ಶಾಸಕರು ಸಲಹೆ ನೀಡಿದರು. ಗ್ರಾಮೀಣ ಪ್ರದೇಶಗಳಲ್ಲಿ ಶಾಲಾ ಮತ್ತು ಅಂಗನವಾಡಿ ಕೊಠಡಿಗಳ ಸುರಕ್ಷತೆಯ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಜಾಗೃತಿ ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿ ಇಂಜಿನಿಯರ್ ಮತ್ತು ಎಇಇ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಮುಂದಾಗಿದ್ದೇವೆ. ಸಂಬಂಧಪಟ್ಟ ನಂಜನಗೂಡು ಕ್ಷೇತ್ರವು ಮುಖ್ಯಮಂತ್ರಿಗಳ ತವರು ಜಿಲ್ಲೆಯ ಕ್ಷೇತ್ರವಾಗಿರುವ ಕಾರಣ ಅಧಿಕಾರಿಗಳು ಜಾಗೃತಿಯಿಂದ ಕಾರ್ಯನಿರ್ವಹಿಸಿ ಜನರ ಸೇವೆಗೆ ಮುಂದಾಗಬೇಕು ಬೇಜವಾಬ್ದಾರಿ ಕಾರ್ಯನಿರ್ವಹಿಸಿದರೆ ಅಂತವರ ವಿರುದ್ಧ ಮುಲಾಜಿಲ್ಲದೆ ನಾವು ಕ್ರಮ ಕೈಗೊಳ್ಳುತ್ತೇವೆ ಎಂದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಶಿವಕುಮಾರ್ ಕಾಸ್ನೂರು, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಪೂರ್ಣಿಮಾ, ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ಗ್ರಾಮೀಣ ಮತ್ತು ಕುಡಿಯುವ ನೀರು ನೈರ್ಮಲ್ಯ ಇಲಾಖೆ ಅಧಿಕಾರಿಗಳಿಗೆ ಸಲಹೆ

ಗ್ರಾಮೀಣ ಪ್ರದೇಶಗಳಲ್ಲಿ ಸಾರ್ವಜನಿಕರು ದಿನನಿತ್ಯ ಸೇವಿಸುವ ಕುಡಿಯುವ ನೀರು ಯೋಗ್ಯವಾಗಿದೆಯಾ ಎಂಬ ಮಾಹಿತಿಯನ್ನು ಅಧಿಕಾರಿಗಳು ತಿಳಿದುಕೊಳ್ಳಬೇಕು ಸಮಸ್ಯೆ ಬಂದ ಮೇಲೆ ಅಲರ್ಟ್ ಆಗುವ ಬದಲು ಅಧಿಕಾರಿಗಳು ಮುಂಚಿತವಾಗಿ ಜಾಗೃತರಾಗಿ ಕಾರ್ಯನಿರ್ವಹಿಸಬೇಕು ತಾಲ್ಲೂಕಿನ ಅತ್ಯಂತ ಶುದ್ಧ ಕುಡಿಯುವ ನೀರಿನ ಘಟಕಗಳು ಕೆಟ್ಟು ನಿಂತಿವೆ ಎಂಬ ಮಾಹಿತಿ ತಿಳಿದು ಬಂದಿದೆ. ಗ್ರಾಮೀಣ ಪ್ರದೇಶಗಳಲ್ಲಿರುವ ಆಸ್ಪತ್ರೆ ಶಾಲಾ ಮತ್ತು ಅಂಗನವಾಡಿ ಕೊಠಡಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ಬಗ್ಗೆ ಪರಿಶೀಲಿಸಬೇಕು ಎಂದು ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಇಲಾಖೆ ಅಧಿಕಾರಿಗೆ ಸಭೆಯಲ್ಲಿ ತಿಳಿಸಿದರು.

ನಲ್ಲಿತಾಳಪುರ ಪಿಡಿಒ ವಿರುದ್ಧ ಶಿಸ್ತುಕ್ರಮಕ್ಕೆ ಮುಂದಾಗಿ ಎಂದು ಇಒಗೆ ಸೂಚನೆ

ತಾಲ್ಲೂಕಿನ ನಲ್ಲಿತಾಳಪುರ ಗ್ರಾಮದಲ್ಲಿ ಕೆಲ ದಿನಗಳ ಹಿಂದೆ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ ಎಂದು ಪತ್ರಿಕಾ ಮಾಧ್ಯಮದಲ್ಲಿ ಬಿತ್ತರವಾಗಿತ್ತು. ಗ್ರಾಮಸ್ಥರು ಕೂಡ ನನಗೆ ಸ್ಪಷ್ಟವಾಗಿ ಮಾಹಿತಿಯನ್ನು ತಿಳಿಸಿದರು. ಅಲ್ಲಿ ಕಾರ್ಯನಿರ್ವಹಿಸುವ ಪಿಡಿಒ ಬೇಜವಾಬ್ದಾರಿ ಕಾರ್ಯ ವೈಖರಿಯ ವಿರುದ್ಧ ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಹಾಗಾಗಿ ಪಿಡಿಒ ವಿರುದ್ಧ ಶಿಸ್ತು ಕ್ರಮಕ್ಕೆ ಮುಂದಾಗಿ ಎಂದು ಸಭೆಯಲ್ಲಿ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಪೂರ್ಣಿಮಾ ರವರಿಗೆ ಶಾಸಕರು ತಿಳಿಸಿದರು.

ಖತರ್ನಾಕ್ ಬೈಕ್ ಕಳ್ಳನ ಬಂಧನ



ಕಾಯಕಯೋಗಿ ಸುದ್ದಿ

ನಂಜನಗೂಡು: ಖತರ್ನಾಕ್ ಬೈಕ್ ಕಳ್ಳನನ್ನು ಬಂಧಿಸುವಲ್ಲಿ ನಂಜನಗೂಡು ಪಟ್ಟಣ ಪೊಲೀಸರು ಯಶಸ್ವಿಯಾಗಿದ್ದು, 19 ಮೋಟಾರ್ ಬೈಕ್ ಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಚಾಮರಾಜನಗರ ಮೂಲದ ಕರಿನಂಜನಪುರ ಗ್ರಾಮದ 56 ವರ್ಷದ ಶಂಕರಪ್ಪ ಬಂಧಿತ ವ್ಯಕ್ತಿಯಾಗಿದ್ದಾನೆ. ನಂಜನಗೂಡು ಪಟ್ಟಣದಲ್ಲಿ ಬೈಕ್ ಗಳ ಕಳವು ಪ್ರಕರಣಗಳು ಹೆಚ್ಚಾದ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್, ಡಿವೈಎಸ್ಪಿ ರಘು ನೇತೃತ್ವದಲ್ಲಿ ವಿಶೇಷ ತಂಡವನ್ನು ರಚನೆ ಮಾಡಲಾಗಿತ್ತು. ಅದರಂತೆ ಪೊಲೀಸರು ನಂಜನಗೂಡಿನ ಶ್ರೀ ನಂಜುಂಡೇಶ್ವರ ಸ್ವಾಮಿ ದೇವಾಲಯದ ಬಳಿ ಗಸ್ತಿಗೆ ತೆರಳಿದ್ದ ವೇಳೆ ವ್ಯಕ್ತಿಯೊಬ್ಬ ಬೈಕ್ ಗಳನ್ನು ನೋಡುತ್ತಿದ್ದನ್ನು ಕಂಡ ನಂಜನಗೂಡು ಪೊಲೀಸರು ಅನುಮಾನಗೊಂಡು ಆತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಬಾಯಿಬಿಟ್ಟಿದ್ದಾನೆ. ಚಾಮರಾಜನಗರ ಪಟ್ಟಣ ಮತ್ತು ಗಡಿಭಾಗದ ಹಳ್ಳಿಗಳಲ್ಲಿ ಸುಮಾರು 19 ಬೈಕ್ ಗಳನ್ನು ಕಳವು ಮಾಡಿದ್ದೇನೆ ಎಂದು ಒಪ್ಪಿಕೊಂಡಿದ್ದಾನೆ. ಸುಮಾರು 15 ಲಕ್ಷ ರೂ. ಬೆಲೆಬಾಳುವ ಬೈಕ್ ಗಳಾಗಿದ್ದು, ಬೈಕ್ ಗಳನ್ನು ಪೋಲೀಸರು ವಶಕ್ಕೆ ಪಡೆದುಕೊಂಡು ಆತನನ್ನು ಜೈಲಿಗಟ್ಟಿದ್ದಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್, ಎಎಸ್ ಪಿ ಡಾ.ನಂದಿನಿ, ಅಪರ ಪೊಲೀಸ್ ಅಧೀಕ್ಷಕ ನಾಗೇಶ್, ನಂಜನಗೂಡು ಡಿವೈಎಸ್ಪಿ ರಘು ರವರ ಮಾರ್ಗದರ್ಶನದಲ್ಲಿ ಪಟ್ಟಣ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರಾದ ಬಿ.ಬಸವರಾಜು, ಅಪರಾಧ ವಿಭಾಗದ ಪಿಎಸ್ಐ ಮಾದೇಗೌಡ, ಪಟ್ಟಣ ಪೊಲೀಸ್ ಠಾಣೆ ಪಿಎಸ್ಐ ಪ್ರಕಾಶ್ ಸಿದ್ದಪ್ಪ ಮದ್ದೂರು ನೇತೃತ್ವದ ತಂಡ ಭರ್ಜರಿ ಕಾರ್ಯಾಚರಣೆ ನಡೆಸಿದೆ.

ಎಎಸ್ಐ ಸತೀಶ್, ಹಪೀಜುಲಾ ಶರೀಫ್, ರಾಜು, ಜಯರಾಮ್, ಶ್ರೀನಿವಾಸ್, ನಾಗೇಶ್, ಶಿವಕುಮಾರ್, ತಿಮ್ಮಯ್ಯ, ಶರಣಪ್ಪ, ಬಸವರಾಜು, ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು. ಪೊಲೀಸರ ಯಶಸ್ವಿ ಕಾರ್ಯಾಚರಣೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮ ಲಾಟ್ಕರ್ ಮತ್ತು ಸಾರ್ವಜನಿಕರು ಪ್ರಸಂಸೆ ವ್ಯಕ್ತಪಡಿಸಿದ್ದಾರೆ.

ಸಂಶೋಧನ ವಿದ್ಯಾರ್ಥಿಗಳಿಂದ ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

ಮೈಸೂರು: ಮೈಸೂರು ವಿಶ್ವವಿದ್ಯಾನಿಲಯದ ಹಿಂದುಳಿದ ವರ್ಗಗಳ ಘಟಕದ ವತಿಯಿಂದ ಸಂಶೋಧನಾ ಕಾರ್ಯವನ್ನು ನಿರ್ವಹಿಸುವ ಸಂಶೋಧನ ವಿದ್ಯಾರ್ಥಿಗಳಿಗೆ ಶಿಷ್ಯವೇತನ ನೀಡುವ ಸಲುವಾಗಿ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಪದವಿಯಲ್ಲಿ ಶೇ. 55ಕ್ಕಿಂತ ಹೆಚ್ಚು ಅಂಕ ಪಡೆದಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ 2023-24 ನೇ ಸಾಲಿನ 20 ಸಂಶೋಧನಾ ವಿದ್ಯಾರ್ಥಿಗಳಿಗೆ ರೂ. 12,000 ಗಳಂತೆ 03 ವರ್ಷದ ಅವಧಿಗೆ ಆಯ್ಕೆ ಮಾಡಲು ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಜೂನ್.10 ರಂದು ಕಛೇರಿ ವೇಳೆಯಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಜುಲೈ 01 ಸಂಜೆ 5.30 ಗಂಟೆಯೊಳಗೆ ನಿಗದಿಪಡಿಸಿದ ದಾಖಲೆಗಳೊಂದಿಗೆ ಮಾರ್ಗದರ್ಶಕರು ಹಾಗೂ ವಿಭಾಗದ ಅಧ್ಯಕ್ಷರು/ನಿರ್ದೇಶಕರು/ಪ್ರಾಂಶುಪಾಲರ ಮುಖಾಂತರ ಹಿಂದುಳಿದ ವರ್ಗಗಳ ಘಟಕದ ಸಂಯೋಜನಾಧಿಕಾರಿಗಳಿಗೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕರ್ನಾಟಕ ರಾಜ್ಯದವರಾಗಿದ್ದು, ಮೈಸೂರು ವಿಶ್ವವಿದ್ಯಾನಿಲಯದಿಂದ (ಸ್ವಾಯತ್ತ ಸಂಸ್ಥೆಗಳನ್ನು ಹೊರತುಪಡಿಸಿ) ಸ್ನಾತಕೋತ್ತರ ಪದವಿಯನ್ನು ಹೊಂದಿರಬೇಕು. ಅಭ್ಯರ್ಥಿಯು 23 ರಿಂದ 35 ವಯಸ್ಸಿನವರಾಗಿರಬೇಕು.

Category-1 ಅಭ್ಯರ್ಥಿಗಳ ವಾರ್ಷಿಕ ಆದಾಯ ರೂ.4.50 ಲಕ್ಷ, Category-II(A), II(B), III(A) ಮತ್ತು III(B) ಅಭ್ಯರ್ಥಿಗಳ ವಾರ್ಷಿಕ ಆದಾಯ ರೂ.3.50 ಲಕ್ಷ ವಾರ್ಷಿಕ ಆದಾಯವನ್ನು ಮೀರಿರಬಾರದು.

ಆದಾಯ ಮತ್ತು ಜಾತಿ ಪ್ರಮಾಣ ಪತ್ರವು ಅಧಿಸೂಚನೆ ಹೊರಡಿಸಿದ ದಿನಾಂಕದಲ್ಲಿ ಚಾಲ್ತಿಯಲ್ಲಿರಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0821-2419906 ಹಾಗೂ ಇ-ಮೇಲ್:obccell@uni-mysore.ac.in ಅನ್ನು ಸಂಪರ್ಕಿಸಬಹುದು ಎಂದು ಮೈಸೂರು ವಿಶ್ವವಿದ್ಯಾನಿಲಯದ ಕುಲ ಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಫ್ತು ನಿರ್ವಹಣಾ ತರಬೇತಿ ಕಾರ್ಯಕ್ರಮ

ಮೈಸೂರು: ಬೆಂಗಳೂರಿನ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರ, ಮೈಸೂರು ಜಿಲ್ಲಾ ಕೈಗಾರಿಕಾ ಕೇಂದ್ರಗಳ ಸಂಯುಕ್ತ ಆಶ್ರಯದಲ್ಲಿ ಕೈಗಾರಿಕೋದ್ಯಮಿಗಳು ಹಾಗೂ ವಾಣಿಜ್ಯೋದ್ಯಮಿಗಳಿಗೆ ಜೂನ್ 24 ರಿಂದ 29 ರವರೆಗೆ 6 ದಿನಗಳ ರಫ್ತು ನಿರ್ವಹಣಾ ತರಬೇತಿ ಕಾರ್ಯಕ್ರಮವನ್ನು ಮೈಸೂರಿನ ಹೋಟೆಲ್ ಪ್ರಿಸಿಡೆಂಟ್‌ನಲ್ಲಿ ಏರ್ಪಡಿಸಲಾಗಿದೆ.

ತರಬೇತಿ ಕಾರ್ಯಕ್ರಮದಲ್ಲಿ ಅಂತರಾಷ್ಟ್ರೀಯ ವ್ಯಾಪಾರಗಳು, ರಫ್ತು ವ್ಯವಹಾರಗಳಿಗೆ ಸಂಬಂಧಿಸಿದ ವಿದೇಶಿ ನೀತಿ ನಿಯಮಗಳು, ರಫ್ತು ಉತ್ಪನ್ನಗಳ ಮೌಲ್ಯ ಹಾಗೂ ಬೆಲೆ ನಿಗದಿಪಡಿಸುವುದು, ವಿವಿಧ ಕೈಗಾರಿಕಾ ಹಾಗೂ ಇತರೆ ಉತ್ಪನ್ನಗಳಿಗೆ ರಫ್ತು ವಲಯಗಳಲ್ಲಿನ ಬೇಡಿಕೆ, ರಫ್ತು ನಿರ್ವಹಣೆ ಮತ್ತು ಮಾರುಕಟ್ಟೆ, ಕೇಂದ್ರ ಅಬಕಾರಿ ಮತ್ತು ಸುಂಕಗಳ ಕುರಿತ ನಿಯಮಾವಳಿಗಳು, ರಫ್ತು ಉತ್ತೇಜನಾ ಸಂಸ್ಥೆಗಳ ನೆರವು, ರಫ್ತು ಉತ್ಪನ್ನಗಳ ವಿಮೆ ಮತ್ತು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ರಫ್ತುದಾರರಿಗೆ ದೊರೆಯುವ ರಿಯಾಯಿತಿ ಮತ್ತು ಪ್ರೋತ್ಸಾಹಗಳು ಹಾಗೂ ಇತರೆ ರಫ್ತು ವ್ಯವಹಾರಗಳ ಬಗ್ಗೆ ಸಂಬಂಧಪಟ್ಟ ಇಲಾಖೆ/ಸಂಸ್ಥೆಗಳ ಅಧಿಕಾರಿಗಳು ತರಬೇತಿದಾರರಿಗೆ ಮಾಹಿತಿ ನೀಡುವರು.

ಆಸಕ್ತ ಉದ್ಯಮಿಗಳು ಹಾಗೂ ವಾಣಿಜ್ಯದಾರರು ಮೈಸೂರಿನ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರದ ಉಪ ನಿರ್ದೇಶಕರ ಬಳಿ ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂ. ಸಂ.9481815035 ಅಥವಾ vipcmysore@gmail.com ಇ-ಮೇಲ್ ಮೂಲಕ ಸಂಪರ್ಕಿಸಬಹುದು ಎಂದು ರಫ್ತು ಮಾಹಿತಿ ಕೇಂದ್ರದ ವಿ.ಟಿ.ಪಿ.ಸಿ.ಯ ಉಪ ನಿರ್ದೇಶಕರ

ಕಾಯಕಯೋಗಿ

12–06–2024
ಬುಧವಾರ

ಅಕ್ರಮ ಗೋವು ಸಾಗಾಟ: ಬಂಧನ



ಗುಂಡ್ಲುಪೇಟೆ:– ಬೇಗೂರು ಸಂತೆಯಿಂದ ಕಸಾಯಿ ಖಾನೆಗೆ ಅಕ್ರಮವಾಗಿ ಸಾಗಿಸುತ್ತಿದ್ದ ಐದು ಜಾನುವಾರುಗಳನ್ನು ರಕ್ಷಣೆ ಮಾಡಿ, ಓರ್ವ ಆರೋಪಿಯನ್ನು ಬಂಧಿಸಿರುವ ಘಟನೆ ತಾಲೂಕಿನ ಕಮರಹಳ್ಳ ರಸ್ತೆಯಲ್ಲಿ ಸೋಮವಾರ ನಡೆದಿದೆ.

ಗುಂಡ್ಲುಪೇಟೆ ಪಟ್ಟಣದ ಗೂಡ್ಸ್ ಆಟೋ ಚಾಲಕ ಅಬ್ದುಲ್ ಜಬ್ಬಾರ್ ಬಂಧಿತ ಆರೋಪಿ. ಉಳಿದ ಇರ್ಷಾದ್ ಹಾಗೂ ಜಾಕೀರ್ ಎಂಬ ಇಬ್ಬರು ಆರೋಪಿಗಳು ಪರಾರಿಯಾಗಿದ್ದಾರೆ.

ಬೇಗೂರು ಸಂತೆಯಿಂದ ಕಮರಹಳ್ಳ ಮಾರ್ಗವಾಗಿ ಐದು ಜಾನುವಾರುಗಳನ್ನು ಕಸಾಯಿ ಖಾನೆಗೆ ಅಕ್ರಮವಾಗಿ ಗೂಡ್ಸ್ ಆಟೋದಲ್ಲಿ ಸಾಗಿಸಿ ಮಾಡುತ್ತಿದ್ದ ಖಚಿತ ಮಾಹಿತಿ ಮೇರೆಗೆ ಬೇಗೂರು ಸಬ್ ಇನ್ಸ್ ಪೆಕ್ಟರ್ ಚರಣ್ ಗೌಡ ನೇತೃತ್ವದ ತಂಡ ದಾಳಿ ನಡೆಸಿ, ಆಟೋ ಸಮೇತ ಜಾನುವಾರುಗಳನ್ನು ಹಿಡಿದಿದ್ದಾರೆ. ಈ ವೇಳೆ ಚಾಲಕ ಅಬ್ದುಲ್ ಜಬ್ಬಾರ್ ಸಿಕ್ಕಿಬಿದ್ದಿದ್ದು, ಇರ್ಷಾದ್ ಹಾಗೂ ಜಾಕೀರ್ ಇಬ್ಬರು ಪರಾರಿಯಾಗಿದ್ದಾರೆ ಪ್ರಕರಣ ದಾಖಲಿಸಿಕೊಂಡಿರುವ ಬೇಗೂರು ಠಾಣೆ ಪೊಲೀಸರು ಜಾನುವಾರುಗಳನ್ನು ಬರಗಿ ಗೋಶಾಲೆಗೆ ರವಾನಿಸಿದ್ದಾರೆ. ಜೊತೆಗೆ ಪರಾರಿಯಾದ ಇಬ್ಬರ ಬಂಧನಕ್ಕೆ ಬಲೆ ಬೀಸಿದ್ದಾರೆ.

ಇಂದು ಜಾಗೃತಿ ಜಾಥಾ ಕಾರ್ಯಕ್ರಮ

ತುಮಕೂರು: ವಿಶ್ವ ಬಾಲಕಾರ್ಮಿಕ ವಿರೋಧಿ ದಿನದ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಇವರ ಸಂಯುಕ್ತಾಶ್ರಯದಲ್ಲಿ ಜೂನ್ 12ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿಯಿಂದ ಗುಬ್ಬಿ ವೀರಣ್ಣ ಕಲಾಕ್ಷೇತ್ರದವರೆಗೆ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಿ. ಜಯಂತಕುಮಾರ್ ಅವರು ನೇರವೇರಿಸಲಿದ್ದು, ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ನೂರುನ್ನಿಸ, ಜಿ.ಪ್ರಭು, ಅಶೋಕ್ ಕೆ.ವಿ., ಮಂಜುನಾಥ ಕೆ., ಎಂ.ಎಸ್. ಶ್ರೀಧರ್, ಸಮಾಜ ಕಲ್ಯಾಣ ಜಂಟಿ ನಿರ್ದೇಶಕ ಎಸ್. ಕೃಷ್ಣಪ್ಪ, ಮಂಜುನಾಥ್, ಎನ್. ಅಂಜಿನಪ್ಪ, ಮಮತ ಎಂ.ಆರ್., ಕೃಷಿ ಇಲಾಖೆ ಜಂಟಿ ನಿರ್ದೇಶಕ ರಮೇಶ್ ಎನ್., ದಿನೇಶ್ ಆರ್.ಎಂ. ಅವರು ಭಾಗವಹಿಸಲಿದ್ದಾರೆ ಕಾರ್ಮಿಕ ಅಧಿಕಾರಿ ತೇಜಾವತಿ ತಿಳಿಸಿದ್ದಾರೆ.

ಅಧ್ಯಕ್ಷರಾಗಿ ಟಿ.ಆರ್. ರೇವಣ್ಣ ಆಯ್ಕೆ



ತುಮಕೂರು: ಜಿಲ್ಲಾ ಸ್ವಾತಂತ್ರ್ಯ ಹೋರಾಟಗಾರರ ಸಂಘದ ನೂತನ ಅಧ್ಯಕ್ಷರಾಗಿ ಹಿರಿಯ ಸ್ವಾತಂತ್ರ್ಯ ಹೋರಾಟಗಾರರಾದ ಟಿ.ಆರ್. ರೇವಣ್ಣ ಅವರು ಆಯ್ಕೆಯಾಗಿದ್ದಾರೆ. ಇತ್ತೀಚೆಗೆ ಜರುಗಿದ ಜಿಲ್ಲಾ ಸ್ವಾತಂತ್ರ್ಯ ಹೋರಾಟಗಾರರ ಸಂಘದ ಸರ್ವ ಸದಸ್ಯರ ಸಭೆಯಲ್ಲಿ ಟಿ.ಆರ್.ರೇವಣ್ಣ ಅವರನ್ನು ನೂತನ ಅಧ್ಯಕ್ಷರನ್ನಾಗಿ, ಕಾರ್ಯಾಧ್ಯಕ್ಷರನ್ನಾಗಿ ಆಶಾ ಪ್ರಸನ್ನಕುಮಾರ್ ಅವರನ್ನು ಆಯ್ಕೆ ಮಾಡಲಾಯಿತು. ಸಂಘದ ಉಪಾಧ್ಯಕ್ಷರಾಗಿ ಡಿ.ಎಸ್. ಪುರುಷೋತ್ತಮ್, ಕಾರ್ಯದರ್ಶಿಯಾಗಿ ಆರ್.ಎಂ.ಸುದರ್ಶನ್, ಜಂಟಿ ಕಾರ್ಯದರ್ಶಿಯಾಗಿ ಧವನಂ ಎ.ಅಮರನಾಥ್, ಸಂಘಟನಾ ಕಾರ್ಯದರ್ಶಿಯಾಗಿ ಚೆನ್ನಕೇಶವ, ಖಜಾಂಚಿಯಾಗಿ ತು.ಮ.ಬಸವರಾಜು, ಪಿ.ಎಂ.ಪ್ರಸನ್ನಕುಮಾರ್, ಎಸ್.ಸತ್ಯನ್ ಆಯ್ಕೆ ಮಾಡಲಾಗಿದೆ.

ಜೂನ್ 14ರಿಂದ ಎಸ್ಎಸ್ಎಲ್ಸಿ ಪರೀಕ್ಷೆ–2

ಪರೀಕ್ಷಾ ಅಕ್ರಮ ತಡೆಯಲು ಸಿಸಿ ಕ್ಯಾಮೆರಾ ಅಳವಡಿಕೆ

ಕಾಯಕಯೋಗಿ ಸುದ್ದಿ

ತುಮಕೂರು: ಜಿಲ್ಲೆಯ ತುಮಕೂರು ಹಾಗೂ ಮಧುಗಿರಿ ಶೈಕ್ಷಣಿಕ ಜಿಲ್ಲೆಯಲ್ಲಿ ಜೂನ್ 14 ರಿಂದ 22ರವರೆಗೆ ಎಸ್ಎಸ್ಎಲ್ಸಿ ಪರೀಕ್ಷೆ–2 ನಡೆಯಲಿದ್ದು, ಪರೀಕ್ಷಾ ಅಕ್ರಮ ತಡೆಯುವ ನಿಟ್ಟಿನಲ್ಲಿ ಎಲ್ಲಾ ಕೊಠಡಿಗಳಿಗೂ ಸಿಸಿ ಕ್ಯಾಮೆರಾ ಅಳವಡಿಸಿ ಜಿಲ್ಲಾ ಹಾಗೂ ತಾಲುಕು ಮಟ್ಟದಲ್ಲಿ ವೆಬ್ ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ತಮ್ಮ ಕಚೇರಿಯಲ್ಲಿಂದು ಪೂರ್ವಭಾವಿ ಸಭೆ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಎಸ್ಎಸ್ಎಲ್ಸಿ ಪರೀಕ್ಷೆ–1ನ್ನು ನಡೆಸಿದ ರೀತಿಯಲ್ಲಿಯೇ ಈ ಪರೀಕ್ಷೆಯನ್ನೂ ಸಹ ಪಾರದರ್ಶಕವಾಗಿ ನಡೆಸಬೇಕು ಎಂದು ಸೂಚಿಸಿದರಲ್ಲದೆ, ಪರೀಕ್ಷಾ ಅಕ್ರಮಗಳನ್ನು ತಡೆಯುವ ನಿಟ್ಟಿನಲ್ಲಿ ಸಿಸಿ ಕ್ಯಾಮೆರಾ ಅಳವಡಿಸಿ ವೆಬ್ ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದ್ದು, ಸಿಸಿ ಕ್ಯಾಮೆರಾ ಅಳವಡಿಕೆಯಿಂದ ಯಾವುದೇ ಆತಂಕ ಪಡುವುದು ಬೇಡ. ಧೈರ್ಯವಾಗಿ ಪರೀಕ್ಷೆಯನ್ನು ಬರೆಯುವಂತೆ ಶಿಕ್ಷಕರು ತಮ್ಮ ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯ ತುಂಬಬೇಕೆಂದು ನಿರ್ದೇಶನ ನೀಡಿದರು.



ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ದೃಷ್ಟಿಯಲ್ಲಿ ಕಟ್ಟುನಿಟ್ಟಿನ ಪರೀಕ್ಷೆ ಅತ್ಯಗತ್ಯ. ಉನ್ನತ ವ್ಯಾಸಂಗಕ್ಕಾಗಿ ನಡೆಯುವ ಎಲ್ಲಾ ಪ್ರವೇಶ ಪರೀಕ್ಷೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳು ಸಿಸಿ ಟಿವಿ ಕಣ್ಗಾವಲಿನಲ್ಲಿಯೇ ನಡೆಯುವುದರಿಂದ ಸಿಸಿ ಕ್ಯಾಮೆರಾ ಅಳವಡಿಕೆಯು ವಿದ್ಯಾರ್ಥಿಗಳಿಗೆ ಮುಂದಿನ ತರಗತಿಗಳ ಪರೀಕ್ಷೆಯನ್ನು ಎದುರಿಸಲು ಸಹಕಾರವಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ತಿಳುವಳಿಕೆ ನೀಡಬೇಕು ಎಂದು ನಿರ್ದೇಶನ ನೀಡಿದರು.

ತುಮಕೂರು ಶೈಕ್ಷಣಿಕ ಜಿಲ್ಲೆಯಲ್ಲಿ 14 ಹಾಗೂ ಮಧುಗಿರಿ ಶೈಕ್ಷಣಿಕ ಜಿಲ್ಲೆಯಲ್ಲಿ 17 ಸೇರಿದಂತೆ ಒಟ್ಟು 31 ಕೇಂದ್ರಗಳಲ್ಲಿ ಜೂನ್ 14 ರಿಂದ 22ರವರೆಗೆ ಎಸ್ಎಸ್ಎಲ್ಸಿ ಪರೀಕ್ಷೆ–2 ನಡೆಯಲಿದ್ದು, ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಲು ಮೇಲ್ವಿಚಾರಕರು ಹಾಗೂ ಡಿ ದರ್ಜೆ ನೌಕರರನ್ನು ನಿಯೋಜಿಸಬೇಕು ಎಂದು ಸೂಚಿಸಿದರು. ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳಿಗೆ ಕುಡಿಯುವ ನೀರಿನ ಸೌಲಭ್ಯ, ಪ್ರತ್ಯೇಕ ಶೌಚಾಲಯ ವ್ಯವಸ್ಥೆ, ಪ್ರತಿ ವಿದ್ಯಾರ್ಥಿಗೂ ಪ್ರತ್ಯೇಕ ಆಸನ ವ್ಯವಸ್ಥೆ ಕಲ್ಪಿಸಬೇಕು. ಪೊಲೀಸ್ ರಕ್ಷಣೆಯೊಂದಿಗೆ ಪ್ರಶ್ನೆಪತ್ರಿಕೆ ಹಾಗೂ ಉತ್ತರ ಪತ್ರಿಕೆಗಳ ಬಂಡಲ್ಗಳನ್ನು ಪರೀಕ್ಷಾ ಕೇಂದ್ರಗಳಿಗೆ ಸಾಗಿಸಬೇಕು ಎಂದು ನಿರ್ದೇಶಿಸಿದರು.

ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ಅನುವಾಗುವಂತೆ ಕೊಠಡಿಗಳಲ್ಲಿ ಉತ್ತಮ ಗಾಳಿ, ಬೆಳಕಿನ ವ್ಯವಸ್ಥೆ ಇರಬೇಕು. ಎಂದು ಸೂಚನೆ ನೀಡಿದರು. ಶಾಲಾ ಶಿಕ್ಷಣ ಇಲಾಖೆ ತುಮಕೂರು ಶೈಕ್ಷಣಿಕ ಜಿಲ್ಲೆಯ ಶಿಕ್ಷಣ ಅಧಿಕಾರಿ ಮಾಧವರೆಡ್ಡಿ ಹಾಗೂ ಮಧುಗಿರಿ ಶೈಕ್ಷಣಿಕ ಜಿಲ್ಲೆಯ ಉಪನಿರ್ದೇಶಕ ಎಂ.ಆರ್.ಮಂಜುನಾಥ್ ಅವರು ಸಭೆಗೆ ಮಾಹಿತಿ ನೀಡುತ್ತಾ, ಜಿಲ್ಲೆಯಲ್ಲಿ 2024ರ ಎಸ್ಎಸ್ಎಲ್ಸಿ ಪರೀಕ್ಷೆ–2ಕ್ಕೆ 739 ವಿದ್ಯಾರ್ಥಿಗಳು ಫಲಿತಾಂಶ ಉತ್ತಮಗೊಳಿಸಲು, 9219 ಪುನರಾವರ್ತಿತ ಹಾಗೂ 252 ಖಾಸಗಿ ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 10210 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ಪರೀಕ್ಷಾ ಕೇಂದ್ರಗಳಿಗೆ ನಿಗಧಿತ ಸಮಯದೊಳಗಾಗಿ ಪ್ರಶ್ನೆ ಪತ್ರಿಕೆಗಳನ್ನು ತಲುಪಿಸಲು 15 ಮಾರ್ಗಗಳನ್ನು ರಚಿಸಲಾಗಿದೆ ಎಂದು ಮಾಹಿತಿ ನೀಡಿದರು. ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಟಾಧಿಕಾರಿ ಮರಿಯಪ್ಪ, ಜಿಲ್ಲಾ ಖಜಾನಾಧಿಕಾರಿ ಉಮಾ ಮಧುಗಿರಿ ಶಿಕ್ಷಣಾಧಿಕಾರಿ ಎನ್.ಶಾಂತಲಾ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ–2ನ್ನು ಸುಸೂತ್ರವಾಗಿ, ಲೋಪದೋಷವಿಲ್ಲದಂತೆ ನಡೆಸುವ ಸಲುವಾಗಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯೊಳಗಿನ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಆದೇಶಿಸಿದ್ದಾರೆ.

ಶ್ರೀ ಸರ್ವಸಿದ್ಧಿವಿನಾಯಕ ಸ್ವಾಮಿಯ 25ನೇ ವರ್ಷದ ವಾರ್ಷಿಕೋತ್ಸವ

ತುಮಕೂರು: ನಗರದ ಶಿರಾ ಗೇಟ್ ಹೌಸಿಂಗ್ ಬೋರ್ಡ್ ಕಾಲೋನಿಯಲ್ಲಿರುವ ಶ್ರೀ ಸರ್ವಸಿದ್ಧಿವಿನಾಯಕ ಸ್ವಾಮಿಯ 25ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ದಿನಾಂಕ: 15.06.2024 ಶನಿವಾರ ಹಾಗೂ ದಿನಾಂಕ 16.06.2024 ಭಾನುವಾರದಂದು ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಭಾನುವಾರ ಮಧ್ಯಾಹ್ನ 12:30ಕ್ಕೆ ಮಹಾಮಂಗಳಾರತಿ, ಅನ್ನ ಸಂತರ್ಪಣೆಯನ್ನು ಏರ್ಪಡಿಸಲಾಗಿದೆ.

ಭಕ್ತಾದಿಗಳು ಈ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶ್ರೀ ಸರ್ವಸಿದ್ಧಿವಿನಾಯಕ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕಾಗಿ ದೇವಸ್ಥಾನದ ಸಮಿತಿ ಮನವಿ ಮಾಡಿದೆ.

ತಾಯಿ ಮಗು ನಾಪತ್ತೆ

ತುಮಕೂರು(ಕ.ವಾ.) ಜೂ.11: ತಿಲಕ್ ಪಾರ್ಕ್ ಪೊಲೀಸ್ ಠಾಣೆ ವ್ಯಾಪ್ತಿಯ ಹೆಬ್ಬೂರು ಹೋಬಳಿ ಸಿದ್ದಣ್ಣನಪಾಳ್ಯದ ಸುಮಾರು 26 ವರ್ಷದ ಹೇಮಲತಾ ಮಹಿಳೆ ತನ್ನ 5 ವರ್ಷದ ಮಗುವಿನೊಂದಿಗೆ ಮಾರ್ಚ್ 28ರಂದು ಕಾಣೆಯಾಗಿರುವ ಬಗ್ಗೆ ದೂರು ದಾಖಲಾಗಿದೆ.

ಕಾಣೆಯಾದ ಮಹಿಳೆ 5.5 ಅಡಿ ಎತ್ತರ, ಕೋಲುಮುಖ, ಸಾಧಾರಣ ಮೈಕಟ್ಟು, ಗೋದಿ ಮೈಬಣ್ಣ ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ಕೆಂಪು ಬಣ್ಣದ ಸೀರೆ ಮತ್ತು ಬಿಳಿಬಣ್ಣದ ಜಂಪರ್ ಧರಿಸಿದ್ದು, ಕಾಣೆಯಾದ ಮಗುವು 2.5 ಅಡಿ ಎತ್ತರ, ದುಂಡುಮುಖ, ಸಾದಾರಣ ಮೈಕಟ್ಟು, ಗೋದಿ ಮೈಬಣ್ಣ ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ಹಳದಿ ಮತ್ತು ಕೆಂಪು ಬಣ್ಣದ ಶರ್ಟ್ ಹಾಗೂ ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿದ್ದು ಈ ತಾಯಿ ಮಗುವಿನ ಬಗ್ಗೆ ಸುಳಿವು ಸಿಕ್ಕವರು ಹತ್ತಿರದ ಪೊಲೀಸ್ ಠಾಣೆ ಅಥವಾ ದೂರವಾಣಿ ಸಂಖ್ಯೆ 0816–2278202, 2278424, 2272340, 9480802981–32–30 ಅನ್ನು ಸಂಪರ್ಕಿಸಬೇಕೆಂದು ಪೊಲೀಸ್ ಇನ್ಸ್ಪೆಕ್ಟರ್ ತಿಳಿಸಿದ್ದಾರೆ.

ಆಸ್ತಿ ತೆರಿಗೆ ರಿಯಾಯಿತಿ ಅವಧಿ ಜು.31ರವರೆಗೆ ವಿಸ್ತರಣೆ

ತುಮಕೂರು: ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿರುವ ಆಸ್ತಿ ತೆರಿಗೆ ಪಾವತಿಗೆ ಸಂಬಂಧಿಸಿದಂತೆ ಶೇ.5ರಷ್ಟು ರಿಯಾಯಿತಿ ತೆರಿಗೆ ಪಾವತಿ ಮಾಡುವ ಅವಧಿಯನ್ನು ಜುಲೈ 31ರವರೆಗೆ ವಿಸ್ತರಣೆ ಮಾಡಲಾಗಿದೆ ಎಂದು ಪಾಲಿಕೆ ಆಯುಕ್ತ ಬಿ.ವಿ.ಅಶ್ವಿಜ ತಿಳಿಸಿದ್ದಾರೆ.

ಆಸ್ತಿ ತೆರಿಗೆ ಪಾವತಿಸಲು ಕಳೆದ ಏಪ್ರಿಲ್ 1 ರಿಂದ 30ರವರೆಗೆ ಮಾತ್ರ ಕಲ್ಪಿಸಲಾಗಿದ್ದ ಶೇ.5ರಷ್ಟು ರಿಯಾಯಿತಿ ತೆರಿಗೆ ಪಾವತಿ ಅವಧಿಯನ್ನು ವಿಸ್ತರಿಸಬೇಕೆಂದು ನಾಗರಿಕರಿಂದ ಬೇಡಿಕೆ ಬಂದ ಹಿನ್ನೆಲೆಯಲ್ಲಿ ಈ ಅವಕಾಶ ಕಲ್ಪಿಸಲಾಗಿದ್ದು, ಜುಲೈ 31ರೊಳಗೆ ಪೂರ್ಣ ಪ್ರಮಾಣದ ಆಸ್ತಿ ತೆರಿಗೆ ಪಾವತಿಸಿದಲ್ಲಿ ಶೇ.5ರಷ್ಟು ರಿಯಾಯಿತಿ ಲಭ್ಯವಾಗಲಿದೆ.

ಮಹಾ ನಗರಪಾಲಿಕೆ ವ್ಯಾಪ್ತಿಯ ಆಸ್ತಿ ಮಾಲೀಕರು ಈ ಸದವಕಾಶದ ಪ್ರಯೋಜನ ಪಡೆಯಬೇಕೆಂದು ಅವರು ಮನವಿ ಮಾಡಿದ್ದಾರೆ.

ಗ್ಯಾರಂಟಿ ಮಾಡಿರುವುದು ಬಡವರಿಗಾಗಿ, ಅದು ಮುಂದುವರೆಯಲಿದೆ



ಕಾಯಕಯೋಗಿ ಸುದ್ದಿ

ಚಾಮರಾಜನಗರ: ಗ್ಯಾರಂಟಿ ಯೋಜನೆ ಅನುಷ್ಠಾನಕ್ಕೆ ತಂದಿದ್ದು ಬಡವರಿಗಾಗಿ, ಕೆಲವರು ತಮ್ಮ ಅಭಿಪ್ರಾಯ ಹೇಳಿರಬಹುದು ಆದರೆ ಗ್ಯಾರಂಟಿ ಮುಂದುವರೆಯಲಿದೆ ಎಂದು ಸಚಿವ ಕೆ.ವೆಂಕಟೇಶ್ ಹೇಳಿದರು.

ಚಾಮ ರಾಜನಗರದಲ್ಲಿ ಮಾಧ್ಯಮದವರೊಂದಿಗೆ ಅವರು ಮಾತನಾಡಿ, ಈಗಾಗಲೇ ಸಿಎಂ ಕೂಡ ಹೇಳಿದ್ದಾರೆ, 100% ಗ್ಯಾರಂಟಿ ಯೋಜನೆಗಳು ಮುಂದುವರೆಯಲಿದೆ, ಪಾರ್ಲಿಮೆಂಟ್ ಚುನಾವಣೆಯೆ ಬೇರೆ– ವಿಧಾನಸಭೆ ಚುನಾವಣೆಯೇ ಬೇರೆ, ಗ್ಯಾರಂಟಿ, ಸಿದ್ದರಾಮಯ್ಯ ಕೆಲಸ, ಕಾರ್ಯಕರ್ತರ ಶ್ರಮ ಎಲ್ಲವೂ ಪರಿಣಾಮ ಬೀರಿದೆ ಎಂದರು.

ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಅಭೂತಪೂರ್ವ ಗೆಲುವು ತಂದು–ಕೊಟ್ಟ ಜನರಿಗೆ 101 ನಮಸ್ಕಾರ ಎಂದರು.

ಮಹಾದೇವಪ್ಪ ಚಾಮರಾಜನಗರ ಜಿಲ್ಲೆ ಉಸ್ತುವಾರಿ ವಹಿಸಲಿದ್ದಾರಾ? ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿ, ನಾನಂತೂ ಉಸ್ತುವಾರಿ ಬದಲಿಸಿ ಎಂದು ಕೇಳಿಲ್ಲ, ಮಹಾದೇವಪ್ಪ ಕೇಳಿರುವ ಬಗ್ಗೆ ಗೊತ್ತಿಲ್ಲ ಎಂದರು.

ಮೊಬೈಲ್ ಟ್ರ್ಯಾಕ್‌ಗೆ ಒಳಗಾಗದೇ ನಮ್ಮನ್ನು ಟ್ರ್ಯಾಕ್ ಮಾಡುವವರಿಂದ ಬಚಾವಾಗಿ

ಕಾಯಕಯೋಗಿ ಸುದ್ದಿ

ತುಮಕೂರು: ನಮ್ಮ ಮೊಬೈಲ್ ಟ್ರ್ಯಾಕ್ ಮಾಡುತ್ತಾ ನಮ್ಮೆಲ್ಲಾ ವ್ಯವಹಾರ ಆಗುಹೋಗು, ನಾವು ಮೊಬೈಲ್ ಬಳಸುವ ರೀತಿನೀತಿಗಳನ್ನು ಅರಿಯುತ್ತಾ, ನಮ್ಮನ್ನು ಅತಿಯಾಸೆಗೆ ಒಳಪಡಿಸುತ್ತಾ ಮೋಸ ಮಾಡಿ ನಮ್ಮಲ್ಲಿನ ಹಣವನ್ನು ದೋಚುವ ಒಂದು ವ್ಯವಸ್ಥೆ ಇದೆ. ಅದೇ ಸೈಬರ್ ಕ್ರೈಮರ್ಸ್. ಅದಕ್ಕೆ ಮುಖ್ಯ ಕಾರಣ ಮೊಬೈಲ್‌ನಲ್ಲಿ ನಮಗೆ ಸರಿಯಾಗಿ ವ್ಯವಹಾರ ಮಾಡಲು ಬಾರದಿರುವುದು ಮತ್ತು ಆಫರ್‌ಗಳಿಗೆ ಮಾರುಹೋಗುವ ನಮ್ಮ ಅತಿಯಾಸೆ ಎಂದು ವಯಾ ವಿಕಾಸ್ ಸಂಸ್ಥೆಯ ಶಂಕರ್‌ರಂಗನಾಥನ್ ತಿಳಿಸಿದರು.

ಅವರು ನಿವೃತ್ತರ ಸಂಘದಲ್ಲಿ ಏರ್ಪಡಿಸಿದ್ದ 'ಡಿಜಿಟಲ್ ಲಿಟರಸಿ' ಬಗ್ಗೆ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು. ಹಿರಿಯ ನಾಗರಿಕರಿಗೆ ಮೊಬೈಲ್ ಮೂಲಕ ನಡೆಸುವ ಎಲ್ಲಾ ವ್ಯವಹಾರದ ಅರಿವು ಕಡಿಮೆ ಇರುವುದರಿಂದ ತುಂಬಾ ಎಚ್ಚರ ವಹಿಸಬೇಕು ಇಂದು ಸೈಬರ್ ಕ್ರೈಮ್ ಪ್ರಕರಣಗಳು ಹೆಚ್ಚುತ್ತಿವೆ. ಎಲ್ಲೆಡೆ ನಮ್ಮ ವೈಯಕ್ತಿಕ ಮಾಹಿತಿಗಳನ್ನು ನೀಡಬಾರದು. ಕೆಲವು ಮೆಸೇಜ್ ಫೋನ್‌ಕಾಲ್‌ಗಳಿಗೆ ಸ್ಪಂದಿಸಬಾರದು, ತಕ್ಷಣ ಉತ್ತರಿಸದೇ ಪ್ರಮಾಣಿಸಿಕೊಳ್ಳಬೇಕು. ನಿಮ್ಮ ಮಗನಿಗೆ ಆಕ್ಸಿಡೆಂಟ್ ಆಗಿದೆ. ಆಸ್ಪತ್ರೆಗೆ ಸೇರಿಸಿದ್ದೇವೆ ತಕ್ಷಣ ಚಿಕಿತ್ಸೆ ನೀಡಬೇಕು ಇಲ್ಲದಿದ್ದರೆ ಜೀವಕ್ಕೆ ಅಪಾಯ ಕೂಡಲೇ ಇಷ್ಟು ಹಣ ಹಾಕಿ, ಫೋನ್ ಪೇ ಮಾಡಿ ಎಂಬಿತ್ಯಾದಿ ಕರೆಗಳು ಬರುತ್ತವೆ. ಗಾಬರಿಯಲ್ಲಿ ಹಣ ಹಾಕಿದರೆ ಮುಗಿಯಿತು. ನಿಮ್ಮ ಉಳಿತಾಯದ ಎಲ್ಲಾ ಹಣ ಖಾಲಿ. ಹಾಗೆ ಕರೆ ಬಂದಾಗ ಆಗಲಿ ನೋಡುತ್ತೇನೆ ಎಂದು ಉತ್ತರಿಸಿ ನಿಮ್ಮ ಮಗನಿಗೇ ನೇರ ಕರೆ ಮಾಡಿ ಆಗ ನಿಜವೇನು ಎಂಬುದು ತಿಳಿಯುತ್ತದೆ. ಇದೇ ರೀತಿ ಕೆ.ಇ.ಬಿ., ಬ್ಯಾಂಕು, ಸ್ನೇಹಿತರ ಹೆಸರಿನಲ್ಲಿ ಹೀಗೆ ಯಾವ ರೀತಿ ಬೇಕಾದರೂ ಕರೆ ಮಾಡಿ ಮೋಸಗೊಳಿಸಬಹುದು. ಈಗ 10 ಸಾವಿರ ಹಾಕಿದರೆ 3 ತಿಂಗಳಲ್ಲಿ 30 ಸಾವಿರ ಕೊಡುತ್ತೇವೆ ಎಂಬಂತಹ ಆಫರ್ ಕರೆಗಳೂ ಬರುತ್ತವೆ. ಇಂತಹವುಗಳು ನಮ್ಮ ದುರಾಸೆ ಅಥವಾ ಅತಿಯಾಸೆಯಿಂದ ಬರುವ ಸಂಕಟಗಳಾಗಿರುತ್ತವೆ. ಇಂತಹ ಸಂದರ್ಭದಲ್ಲಿ ನಾವು ವಹಿಸಬೇಕಾದ ಎಚ್ಚರಗಳನ್ನು ಕುರಿತು ಸವಿವರವಾಗಿ ತಿಳಿ

ಫಸಲ್ ಬಿಮಾ ಯೋಜನೆ ನೊಂದಣಿ

ಹಾಸನ : ಅನಿಶ್ಚಿತ ಕೃಷಿಯಲ್ಲಿ ನಿಶ್ಚಿತ ಆದಾಯ ತರುವ ಉದ್ದೇಶದಿಂದ ಹಾಸನ ಜಿಲ್ಲೆ ಹಾಸನ ತಾಲ್ಲೂಕಿನಲ್ಲಿ ಓರಿಯೆಂಟಲ್ ಜನರಲ್ ಇನ್ಸುರೆನ್ಸ್ ಕಂಪನಿ ಲಿ. ಬೆಂಗಳೂರು ಇವರ ಸಹಯೋಗದೊಂದಿಗೆ 2024–25ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಹೋಬಳಿ ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯನ್ನು ಅನುಷ್ಠಾನಗೊಳಸಲಾಗುತ್ತಿದ್ದು, ತಾಲ್ಲೂಕಿನಲ್ಲಿ ರೈತರು ಬೆಳೆಯುವ ಮುಂಗಾರು ಬೆಳೆಗಳಾದ ಹೆಸರು, ಉದ್ದು, ಅಲಸಂದೆ, ಮುಸುಕಿನ ಜೋಳ, ಭತ್ತ, ರಾಗಿ ಹಾಗೂ ಆಲೂಗೆಡ್ಡೆ ಬೆಳೆಗಳನ್ನು ಬೆಳೆಯುವ/ಬೆಳೆದಿರುವ ಎಲ್ಲಾ ರೈತರು ಅರ್ಜಿಯೊಂದಿಗೆ ಭೂಮಿ, ದಾಖಲೆಗಳಾದ ಪಹಣಿ/ಕಂದಾಯ ರಶೀದಿ/ಖಾತೆ ಪುಸ್ತಕ/ಬ್ಯಾಂಕ್ ಪುಸ್ತಕ ಮತ್ತು ಆಧಾರ್ ಕಾರ್ಡ್ ದಾಖಲೆಗಳೊಂದಿಗೆ ಹತ್ತಿರದ ಬ್ಯಾಂಕ್, ಕರ್ನಾಟಕ ಒನ್. ಗ್ರಾಮ ಒನ್ ಹಾಗೂ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಬೆಳೆ ವಿಮೆಗೆ ನೊಂದಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರ, ಬೆಳೆ ವಿಮಾ ಸಂಸ್ಥೆ, ತೋಟಗಾರಿಕೆ. ಇಲಾಖೆ, ಸಹಕಾರ ಇಲಾಖೆ ಹಾಗೂ ಬೆಳೆ ಸಾಲ ನೀಡುವ ಬ್ಯಾಂಕ್ ಅಥವಾ ಸಹಕಾರಿ ಬ್ಯಾಂಕ್‌ಗಳನ್ನು ಸಂಪರ್ಕಿಸಬಹುದು ಎಂದು ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.



ರಾಮನಗರ ಜಿಲ್ಲಾ ಪ್ರವಾಸೋದ್ಯಮ ಇಲಾಖೆ ಹಾಗೂ ಜನರಲ್ ತಿಮ್ಮಯ್ಯ ನ್ಯಾಷನಲ್ ಅಡ್ವೆಂಚರ್ ಅಕಾಡೆಮಿಯ ಸಂಯುಕ್ತಾಶ್ರಯದಲ್ಲಿ ಅಡ್ವೆಂಚರ್ ಆಕ್ಟಿವಿಟೀಸ್‌ನ 10 ದಿನಗಳ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ರವಿಕುಮಾರ್ ಹಾಗೂ ಜನರಲ್ ತಿಮ್ಮಯ್ಯ ಅಕಾಡೆಮಿ ಅಧ್ಯಕ್ಷರು ಭಾಗವಹಿಸಿದ್ದರು.

ಹಾಸನ: ಲಾರಿ ಕೊಡಿಸಲಿಲ್ಲ ಎಂದು ತಂದೆಯನ್ನೇ ಬಡಿದು ಕೊಂದ ಮಗ!

ಹಾಸನ: ಮಗನಿಂದಲೇ ತಂದೆಯ ಬರ್ಬರ ಹತ್ಯೆಗೀಡಾಗಿರುವ ಘಟನೆ ಆಲೂರು ತಾಲ್ಲೂಕಿನ, ಕಡಬಗಾಲ ಗ್ರಾಮದಲ್ಲಿ ನಿನ್ನೆ ರಾತ್ರಿ ನಡೆದಿದೆ.

ಚಂದ್ರಶೇಖರ್ (60) ಕೊಲೆಯಾದ ವ್ಯಕ್ತಿ, ಸಚಿನ್ (30) ತಂದೆಯನ್ನೇ ಕೊಲೆ ಮಾಡಿದ ಪಾಪಿ ಪುತ್ರ.

ಡ್ರೈವರ್ ಕೆಲಸ ಮಾಡುತ್ತಿದ್ದ ಸಚಿನ್ ಕಂಠಪೂರ್ತಿ ಕುಡಿದೇ ಮನೆಗೆ ಬರುತ್ತಿದ್ದ. ಬಂದಾಗಲೆಲ್ಲ ಜಮೀನು ಮಾರಾಟ ಮಾಡಿ ತನಗೆ ಲಾರಿ ಕೊಡಿಸುವಂತೆ ತಂದೆ ಜತೆ ಜಗಳವಾಡುತ್ತಿದ್ದ ಎನ್ನಲಾಗಿದೆ.ನಿನ್ನೆ ರಾತ್ರಿಯೂ ತಂದೆಯೊಂದಿಗೆ ಜಗಳ ಶುರು ಮಾಡಿದ ಸಚಿನ್ ಎಡಮಟ್ಟೆಯಿಂದ (ತೆಂಗಿನಗರಿ ಮಟ್ಟೆ) ತಂದೆಯ ಮೇಲೆ ಹಲ್ಲೆ ನಡೆಸಿ ಹತ್ಯೆ ಮಾಡಿ ಪರಾರಿಯಾಗಿದ್ದಾನೆ.

ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದ ಆಲೂರು ಪೊಲೀಸರು ಪ್ರಕರಣ ದಾಖಲಿಸಿಕೊಂಡು ಶವವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ.

ರಾಜ್ಯದಿಂದ ಹೊಸದಾಗಿ ಆಯ್ಕೆಯಾದ 28 ಸಂಸದರು ಮೇಕೆದಾಟು ಯೋಜನೆಗೆ ಪ್ರಾಮಾಣಿಕವಾಗಿ ಪ್ರಯತ್ನ ಮಾಡಲಿ: ಯೋಗೀಶ್‌ಗೌಡ

ಕಾಯಕಯೋಗಿ ಸುದ್ದಿ

ಚನ್ನಪಟ್ಟಣ: ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಸೋಮವಾರ ನಡೆದ 249 ನೇ ದಿನದ ಹೋರಾಟದಲ್ಲಿ ಮಾತನಾಡಿದ ವೇದಿಕೆ ಜಿಲ್ಲಾಧ್ಯಕ್ಷ ಬೇವೂರು ಯೋಗೀಶ್‌ಗೌಡ, ರಾಜ್ಯದಿಂದ ಹೊಸದಾಗಿ ಆಯ್ಕೆಯಾದ 28 ಸಂಸದರು ಪ್ರಮಾಣ ವಚನ ಸ್ವೀಕಾರ ಮಾಡಿದ್ದಾರೆ. ಇವರು ಕಾವೇರಿ ನೀರು ಹಂಚಿಕೆ ವಿವಾದ ಹಾಗೂ ಮೇಕೆದಾಟು ಅಣೆಕಟ್ಟೆ ನಿರ್ಮಾಣದ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಗಮನ ಸೆಳೆಯಲು ಮುಂದಾಗಬೇಕು ಕಕಜವೇದಿಕೆ ಮೂಲಕ ನಾಡು, ನುಡಿ ಹೋರಾಟಕ್ಕೆ ಬರುವವರಿಗೆ ರೇಷ್ಮೆನಾಡು ಕ್ರೀಡಾ ಮತ್ತು ಸಾಂಸ್ಕೃತಿಕ ಟ್ರಸ್ಟ್ ನೇತೃತ್ವದಲ್ಲಿ "ಹಸಿರಿದ್ದರೆ–ಉಸಿರು" ಎಂಬ ಘೋಷವಾಕ್ಯದ ಮೂಲಕ ಪರಿಸರ ಸಂರಕ್ಷಣೆ ಮಾಡುವ ಜನಾಂದೋಲನದಡಿ ನಿತ್ಯ 25 ಗಿಡ ವಿತರಣೆ ಮಾಡಿ ಪರಿಸರ ಸಂರಕ್ಷಣೆ ಬಗ್ಗೆ ಜಾಗೃತಿ ಮೂಡಿಸುವ ಆಂದೋಲನಕ್ಕೆ ಜ್ಞಾನ ಸರೋವರ ಕಾಲೇಜಿನ ವಿದ್ಯಾರ್ಥಿಗಳು ಬೆಂಬಲ ನೀಡಿದ್ದಾರೆ.



ಪರಿಸರದಲ್ಲಿ ಗಿಡಮರಗಳು ಹೆಚ್ಚಾದಷ್ಟು ಪ್ರಕೃತಿಯಲ್ಲಿ ಸಮತೋಲನ ಉಂಟಾಗುವ ಜೊತೆಗೆ ಬೇಸಿಗೆ ಕಾಲ, ಮಳೆಗಾಲ, ಚಳಿಗಾಲಗಳು ಋತುಮಾನಗಳಿಗೆ ಅನುಕೂಲವಾಗುವಂತೆ ಕಾಪಾಡುವ ಜೊತೆಗೆ ಮಳೆ, ಗಾಳಿ, ನೀರು, ಬೆಳೆ ಎಲ್ಲವೂ ಸರಿಯಾದ ಪ್ರಮಾಣದಲ್ಲಿ ಕಾಣುವಂತಾಗುತ್ತದೆ. ಆದರೆ ಆಧುನಿಕ ತಂತ್ರಜ್ಞಾನಕ್ಕೆ ಸಿಲುಕಿ ಮರಗಳ ಮಾರಣ ಹೋಮ ಮಾಡಿರುವ ಮನುಷ್ಯರ ದುರಾಸೆಯಿಂದ ಇಂದು ಪ್ರಕೃತಿಯಲ್ಲಿ ಸಮತೋಲನ ಇಲ್ಲದಂತಾಗಿ ಬಿಸಿಲಿನ ತಾಪ ಹೆಚ್ಚಾಗಿ ಮಳೆಗಾಲದಲ್ಲಿ ಮಳೆ ಆಗದೆ ನೀರಿನ ಅಭಾವ ಉಂಟಾಗುತ್ತಾ ಬಂದಿದೆ. ಈ ನಿಟ್ಟಿನಲ್ಲಿ ನಾವೆಲ್ಲಾ ಪರಿಸರ ಸಂರಕ್ಷಣೆಗೆ ಮುಂದಾಗಲು ಪಣ ತೊಡಬೇಕಿದೆ ಎಂದರು.

ನಿವೃತ್ತ ಪ್ರಾಂಶುಪಾಲರು ಹಾಗೂ ಚನ್ನಪಟ್ಟಣ ಸ್ಪೋರ್ಟ್ಸ್ ಕ್ಲಬ್‌ನ ಅಧ್ಯಕ್ಷರಾದ ನಿಂಗೇಗೌಡರು(ಎನ್‌ಜಿ) ಮಾತನಾಡಿ, ನಮ್ಮ ಪೂರ್ವಜನರು ಪ್ರಕೃತಿಗೆ ಪೂಜ್ಯನೀಯ ಸ್ಥಾನ ನೀಡುತ್ತಾ ಬಂದಿದ್ದರೂ. ಯಾವುದೇ ನ್ಯಾಯ ಪಂಚಾಯ್ತಿ ಮಾಡಿದರೂ ಅರಳಿಕಟ್ಟೆಯ ಕೆಳಗೆ ಕೂತು ಮತದ ಮೇಲೆ ಪ್ರಮಾಣ ಮಾಡಿ ನ್ಯಾಯಕ್ಕೆ ಮುಕ್ತಿ ನೀಡುತ್ತಿದ್ದರು. ಅಲ್ಲದೆ ಮರಗಳನ್ನು ಸಾಕ್ಷಿಯಾಗಿಸಿ ಸಾಲ ನೀಡುತ್ತಿದ್ದರು. ಹೊರಗೆ ಹೋಗಬೇಕಾದರೆ ಮನೆಯ ಮುಂದಿನ ಮರಕ್ಕೆ ಕೈ ಮುಗಿದು ಹೋಗುವ ಸಂಸ್ಕಾರ ಇತ್ತು. ಜೊತೆಗೆ ಮಳೆ ಬಂದಾಗ ನೀರಿನ ಜೊತೆ ಮಣ್ಣಿನ ಫಲವತ್ತದೆ ಕೊಚ್ಚಿಹೋಗದಂತೆ ಕಾಪಾಡುವ ನಿಟ್ಟಿನಲ್ಲಿ ಹೊಲಗದ್ದೆಗಳಿಗೆ ತೆವರಿಗೆ (ಬದು) ಸುತ್ತಲೂ ಮರಗಳನ್ನು ಬೆಳೆಸುತ್ತಿದ್ದರು. ಆದರೆ ಇಂದು ಆಧುನಿಕತೆಯ ಸೋಗಿನಲ್ಲಿ ನಮ್ಮ ಪೂರ್ವಜರು ನೆಟ್ಟು ಬೆಳೆಸಿದ ಮರಗಳನ್ನು ಕಡಿದು ಅಪಾರ್ಟ್‌ಮೆಂಟ್‌ಗಳನ್ನು ನಿರ್ಮಾಣ ಮಾಡಿ ಉತ್ತಮ ಗಾಳಿ ಇಲ್ಲದಂತೆ ಮಾಡಿದ್ದು, ಮಣ್ಣು ಫಲವತ್ತತೆಯನ್ನು ಕಳೆದುಕೊಳ್ಳುವಂತೆ ಮಾಡಿದ್ದೇವೆ. ನಮ್ಮ ಮಕ್ಕಳಿಗೆ ಶುದ್ಧ ಗಾಳಿ ಎಲ್ಲಿದೆ ಎಂದರೆ ಅದನ್ನು ಆಸ್ಪತ್ರೆಯಲ್ಲಿನ ಆಮ್ಲಜನಕವನ್ನು ಉದಾಹರಣೆ ಕೊಟ್ಟು ಹೇಳುವಂತಾಗಿದೆ. ಈ ನಿಟ್ಟಿನಲ್ಲಿ ನಾವು ಮಕ್ಕಳಿಗೆ ಶಿಕ್ಷಣದ ಜೊತೆಗೆ ಪರಿಸರ ಸಂರಕ್ಷಣೆಯ ಬಗ್ಗೆ ಸಹ ಅರಿವು ಮೂಡಿಸುವ ಜವಾಬ್ದಾರಿ ಇದೆ ಎಂದರು.

ಇದೇ ವೇಳೆ ಕಾಲೇಜಿನ ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆ ಬಗ್ಗೆ ಜಾಗೃತಿ ಮೂಡಿಸಿ ಜನರಿಗೆ ಸಸಿ ವಿತರಣೆ ಮಾಡಿದರು.

ಸಂದರ್ಭದಲ್ಲಿ ಜಗದಾಪುರ ಕೃಷ್ಣೇಗೌಡ, ನಿವೃತ್ತ ಶಿಕ್ಷಕ ಪುಟ್ಟಪ್ಪಾಜಿ, ಮೆಣಸಿಗನಹಳ್ಳಿ ರಾಮಕೃಷ್ಣಪ್ಪ, ಚಿಕ್ಕಣ್ಣಪ್ಪ, ಸಂಕಲಗೆರೆ ಹುಚ್ಚಪ್ಪ, ಚಿಕ್ಕೇನಹಳ್ಳೀ ಸಿದ್ದಪ್ಪಾಜಿ, ಜ್ಞಾನ ಸರೋವರ ಕಾಲೇಜಿನ ಪ್ರಾಂಶುಪಾಲರಾದ ಹೇಮಲತಾ, ಕಾರ್ಯದರ್ಶಿ ಆದರ್ಶ ಕುಮಾರ್ ಆರ್, ಉಪನ್ಯಾಸಕರುಗಳಾದ ಹೊಲಸಾಲಯ್ಯ, ಪ್ರವೀಣ್, ಝಾಕಿರ್ ಹುಸೇನ್, ವಿನಯ್ ಕುಮಾರ್, ಶೃತಿ, ಭಾವನ, ಚಂದನ, ರೂಪ, ಸುಂದ್ರಮ್ಮ ಇನ್ನೂ ಅನೇಕರು ಹಾಜರಿದ್ದರು.

ಇಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚರಣೆ

ಹಾಸನ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಜಿಲ್ಲಾ ವಕೀಲರ ಸಂಘ, ಹಾಸನ ಜಿಲ್ಲೆ, ಹಾಸನ. ಇವರ ಸಹಯೋಗದೊಂದಿಗೆ ಜೂ.12 ರಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದ ಹಿನ್ನೆಲೆಯಲ್ಲಿ ಜನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಜೂ.12 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಭಾರ ಸದಸ್ಯ ಕಾರ್ಯದರ್ಶಿಗಳಾದ ಪುಟ್ಟಸ್ವಾಮಿ ಕೆ. ಎಂ, ಅವರು ಚಾಲನೆ ನೀಡಲಿದ್ದಾರೆ.

ಅಂದು ಬೆಳಿಗ್ಗೆ 10 ಗಂಟೆಗೆ ಅಂಬೇಡ್ಕರ್ ಭವನದಲ್ಲಿ ಜರುಗಲಿರುವ ಸಭಾ ಕಾರ್ಯಕ್ರಮವನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಟಿ. ಎನ್. ಇನವಳ್ಳಿ ರವರು ಉದ್ಘಾಟನೆ ಮಾಡಲಿದ್ದಾರೆ.

ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಅಧ್ಯಕ್ಷರಾದ ಸತ್ಯಭಾಮ ಸಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಉಪಾಧ್ಯಕ್ಷರಾದ ಬಿ.ಆರ್ ಪೂರ್ಣಿಮಾ, ಪೊಲೀಸ್ ವರಿಷ್ಠಾಧಿಕಾರಿಗಳಾದ ಮೊಹಮ್ಮದ್ ಸುಜಿತ ಎಂ. ಎಸ್, ಅಪರ ಜಿಲ್ಲಾಧಿಕಾರಿಗಳಾದ ಕೆ.ಟಿ. ಶಾಂತಲ ಮತ್ತಿತರರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಟ್ರಾಕ್ಟರ್ ಪಲ್ಟಿ ಬಾಲಕ ಸಾವು



ಕಾಯಕಯೋಗಿ ಸುದ್ದಿ

ಕನಕಪುರ: ಉಳುಮೆ ಮಾಡುವಾಗ ಟ್ರಾಕ್ಟರ್ ಪಲ್ಟಿ ಹೊಡೆದು ಟ್ರಾಕ್ಟರ್ ಕೆಳಗೆ ಸಿಲುಕಿ ಬಾಲಕ ಸಾವನಪ್ಪಿರುವ ಮನಕಲಕುವ ಘಟನೆ ಅರಳಗಡಕಲು ಗ್ರಾಮದಲ್ಲಿ ನಡೆದಿದೆ.

ತಾಲ್ಲೂಕಿನ ಕೋಡಿಹಳ್ಳಿ ಹೋಬಳಿ ಬಿಜ್ಜಳ್ಳಿ ಗ್ರಾಮದ ಸ್ವಾಮಿ ಅವರ ಪುತ್ರ ಚಂದನ್ (10) ಮೃತಪಟ್ಟಿರುವ ಬಾಲಕ ಎಂದು ಗುರುತಿಸಲಾಗಿದೆ ಬಾಲಕನ ತಂದೆ ಸ್ವಾಮಿ ಅವರು ಕೋಡಿಹಳ್ಳಿ ಗ್ರಾಮದಲ್ಲಿ ವಾಸವಾಗಿದ್ದರು. ಮೃತ ಬಾಲಕ ಕೋಡಿಹಳ್ಳಿ ಹಿಪ್ಪೋ ಕ್ಯಾಂಪಸ್ ಶಾಲೆಯಲ್ಲಿ 4 ನೇ ತರಗತಿ ವ್ಯಾಸಂಗ ಮಾಡುತ್ತಿದ್ದ.

ಭಾನುವಾರ ಶಾಲೆಗೆ ರಜೆ ಇದ್ದುದರಿಂದ ತಮ್ಮ ತಾಯಿಯ ಮನೆ ಅರಳಗಡಕಲು ಗ್ರಾಮಕ್ಕೆ ಹೋಗಿದ್ದ ಸಮಯದಲ್ಲಿ ಜಮೀನು ಉಳುಮೆ ಮಾಡುವ ವೇಳೆ ಟ್ರಾಕ್ಟರ್ ಚಾಲಕನ ನಿಯಂತ್ರಣ ಕಳೆದುಕೊಂಡು ಪಲ್ಟಿ ಹೊಡೆದಿದ್ದು ಮೇಲೆ ಕುಳಿತ್ತಿದ್ದ ಬಾಲಕ ಟ್ರಾಕ್ಟರ್ ಕೆಳಗೆ ಸಿಲುಕಿ ಸಾನಪ್ಪಿದ್ದಾನೆ.

ಘಟನೆ ಸಂಬಂಧ ಕೋಡಿಹಳ್ಳಿ ಪೊಲೀಸ್ ಠಾಣೆಗೆ ಮೃತರ ಪೋಷಕರು ಟ್ರಾಕ್ಟರ್ ಚಾಲಕನ ವಿರುದ್ಧ ದೂರು ನೀಡಿದ್ದಾರೆ. ಪೊಲೀಸರು ಚಾಲಕನ ವಿರುದ್ಧ ಪ್ರಕರಣ ದಾಖಲಿಸಿಕೊಂಡು ದಯಾನಂದ ಸಾಗರ್ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ ಮೃತದೇಹವನ್ನು ಪೋಷಕ ರಿಗೆ ಹಸ್ತಾಂತರಿಸಲಾಗಿದೆ.


ನೆರೆ ಹಾವಳಿ ತಡೆಗಟ್ಟಲು ಪೂರ್ವ ಸನ್ನದ್ಧರಾಗುವಂತೆ ಸೂಚನೆ

ಕಾಯಕಯೋಗಿ ಸುದ್ದಿ

ರಾಮನಗರ: ಹವಾಮಾನ ಇಲಾಖೆಯ ವರದಿಯಂತೆ ಈ ಬಾರಿ ಜಿಲ್ಲೆಯಲ್ಲಿ ಹೆಚ್ಚು ಮಳೆಯಾಗುವ ಸಂಭವವಿದ್ದು, ನೆರೆ ಅಥವಾ ಪ್ರವಾಹದಿಂದ ಉಂಟಾಗುವ ಸಂಭಾವ್ಯ ಅನಾಹುತಗಳನ್ನು ತಡೆಗಟ್ಟಲು ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಬೇಕು, ತಪ್ಪಿದ್ದಲ್ಲೀ ಅವರ ವಿರುದ್ಧ ಸೂಕ್ತ ಕ್ರಮವಹಿಸಲಾಗುವುದು ಎಂದು ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳೂ (ವಿಪತ್ತು ನಿರ್ವಹಣೆ, ನೋಂದಣಿ & ಮುದ್ರಾಂಕ ಹಾಗೂ ಸಾಮಾಜಿಕ ಭದ್ರತೆ) ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ವಿ. ರಶ್ಮಿ ಮಹೇಶ್ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅವರು ಜೂ.11ರ ಮಂಗಳವಾರ ನಗರದ ಜಿಲ್ಲಾ ಪಂಚಾಯಿತ್ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಮುಂಗಾರು ಪೂರ್ವಸಿದ್ಧತೆ ಹಾಗೂ ಬರಗಾಲ ನಿವಾರಣೆಯ ಕುರಿತು ಆಯೋಜಿಸಲಾಗಿದ್ದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜೂನ್ ಮತ್ತು ಜುಲೈ ಮಾಹೆಯಲ್ಲಿ ಮುಂಗಾರು ಮಳೆಯಾಗಲಿದೆ, ಈ ಸಂದರ್ಭದಲ್ಲಿ ಎದುರಾಗುವ ನೆರೆ ಹಾಗೂ ಪ್ರವಾಹದ ಸ್ಥಿತಿಗಳನ್ನು ಸಮರ್ಪಕವಾಗಿ ಎದುರಿಸಲು ಅಧಿಕಾರಿಗಳು ಪೂರ್ವ ಸನ್ನದ್ಧರಾಗಿರಬೇಕು, ಅವರು ಕೇಂದ್ರಸ್ಥಾನದಲ್ಲಿಯೇ ಇರಬೇಕು, ಕಳೆದ ಬಾರಿ ಜಿಲ್ಲೆಯಲ್ಲಿ ಉಂಟಾದ ಪ್ರವಾಹ/ನೆರೆ ಸ್ಥಳಗಳ ಬಗ್ಗೆ ಎಚ್ಚರ ವಹಿಸಬೇಕು, ಜನ, ಜಾನುವಾರುಗಳ ಸಂರಕ್ಷಣೆ ಹಾಗೂ ಯಾವುದೇ ಜೀವ ಹಾನಿಯಾಗದಂತೆ ಎಚ್ಚರವಹಿಸಬೇಕು, ನೆರೆಯಿಂದಾಗಿ ಮನೆಗಳ ಕುಸಿತವಾದಲ್ಲೀ ಕೂಡಲೇ ಅವರ ಸ್ಥಳಾಂತರ ಹಾಗೂ ಪರಿಹಾರ ನೀಡಲು ಸನ್ನದ್ಧರಾಗಿರಬೇಕು ಎಂದರು. ರೈತರಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರ ವಿತರಣೆಯಲ್ಲಿ ಯಾವುದೇ ವ್ಯತ್ಯಯವುಂಟಾಗಬಾರದು, ಕಳೆದ ಸಾಲಿನಲ್ಲಿ 44,128 ಎಕರೆ ಪ್ರದೇಶದಲ್ಲಿ ಬೆಳೆ ನಾಶವಾಗಿದ್ದು ನಾಲ್ಕು ಸಾವಿರ ರೈತರಿಗೆ 200 ಲಕ್ಷ ರೂ. ಬರ ಪರಿಹಾರ ವಿತರಿಸಲಾಗಿದೆ ಎಂದವರು ಮಾಹಿತಿ ನೀಡಿದರು.



ರೈತರ ಕೋರಿಕೆಯಂತೆ ಬಿತ್ತನೆ ಬೀಜಗಳ ಗುಣಮಟ್ಟವನ್ನು ಪರೀಕ್ಷಿಸಿ ಪೂರೈಸಬೇಕು, ಅಗತ್ಯಕ್ಕೆ ತಕ್ಕಷ್ಟು ದಾಸ್ತಾನಿರಬೇಕು, ಈ ಕುರಿತು ರೈತರಿಂದ ಯಾವುದೇ ದೂರುಗಳು ಬಾರದಂತೆ ಕಾರ್ಯ ನಿರ್ವಹಿಸಬೇಕು ಮತ್ತು ಕಡ್ಡಾಯವಾಗಿ ಬಿತ್ತನೆ ಬೀಜಗಳ ದಾಸ್ತಾನು ಮಾಹಿತಿಯನ್ನು ರೈತರಿಗೆ ನೀಡಬೇಕು ಅಲ್ಲದೆ ಅಂಗಡಿಗಳ ಮುಂಭಾಗದಲ್ಲಿ ಪ್ರತಿದಿನ ಪ್ರದರ್ಶಿಸಬೇಕು, ಇದನ್ನು ತಹಶೀಲ್ದಾರರು ಪರಿಶೀಲಿಸಬೇಕು ಎಂದು ಸೂಚಿಸಿದರು.

ಪ್ರಸ್ತುತ ತೊಗರಿ 31.70, ಅಲಸಂದೆ, 36.75, ರಾಗಿ, 315.35, ಮುಸುಕಿನ ಜೋಳ 50.28 ಮತ್ತು ನೆಲಗಡಲೆ 3.85 ಕ್ವಿಂಟಾಲ್ ಬಿತ್ತನೆ ಬೀಜಗಳು ದಾಸ್ತಾನಿದೆ, ಜಿಲ್ಲೆಯಲ್ಲಿ ಇದೂವರೆಗೆ ಭಾರಿ ಗಾಳಿ ಮತ್ತು ಮಳೆಯಿಂದ ಜಿಲ್ಲೆಯಲ್ಲಿ ತೆಂಗು, ಪಪ್ಪಾಯ, ಬಾಳೆ, ಅಡಿಕೆ ಮತ್ತು ವಿಳ್ಯದೆಲೆ ಬೆಳೆಗಳು ಒಟ್ಟು 52.60 ಎಕರೆಯಷ್ಟು ಹಾನಿ, 41 ಮನೆಗಳು ಸಣ್ಣ ದುರಸ್ತಿಯಾಗಿದೆ ಯಾವುದೇ ಜೀವಹಾನಿ ಆದ ಬಗ್ಗೆ ವರದಿಯಾಗಿಲ್ಲ ಎಂದರು.

ಕಳೆದ ಬಾರಿ ರಾಮನಗರ ಮತ್ತು ಚನ್ನಪಟ್ಟಣ ತಾಲ್ಲೂಕುಗಳಲ್ಲಿ ನೆರೆ ಹಾವಳಿಯಿಂದಾದ ಸಮಸ್ಯೆಗಳು ಈ ಬಾರಿ ಮರುಕುಳಿಸದಂತೆ ಎಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು, ತಿಪ್ಪಗೊಂಡನಹಳ್ಳಿ ಸುತ್ತಮುತ್ತಲು ಭಾರಿ ಮಳೆಯಾಗುತ್ತಿರುವುದರಿಂದ ಆ ಜಲಾಶಯಕ್ಕೆ ಒಳ ಹರಿವು ಹೆಚ್ಚುತ್ತಿದ್ದು, ತಿಪ್ಪಗೊಂಡನಹಳ್ಳಿ ಜಲಾಶಯದಿಂದ ನೀರು ಬಿಡುಗಡೆ ಮಾಡಿದ್ದಲ್ಲೀ ಅದು ಮಂಚನಬೆಲೆ ಜಲಾಶಯಕ್ಕೆ ಪ್ರವೇಶಿಸುತ್ತದೆ, ಆಗ ಮಂಚನಬೆಲೆ ಜಲಾಶಯದ ಸುತ್ತಮತ್ತಲಿನ ಪ್ರದೇಶದ ಜನರು ನೆರೆಯಂತಹ ತೊಂದರ

ಕಾಯಕಯೋಗಿ

12–06–2024
ಬುಧವಾರ

ಬಕ್ರೀದ್ ಹಿನ್ನೆಲೆಯಲ್ಲಿ ಕುರಿ ಮತ್ತು ಮೇಕೆಗಳಿಗೆ ಬೇಡಿಕೆ ಹೆಚ್ಚಳ

ಹರ್ಷ.ಪಿ,ದೇವನಹಳ್ಳಿ
ಕಾಯಕಯೋಗಿ ಸುದ್ದಿ

ದೇವನಹಳ್ಳಿ: ತ್ಯಾಗ ಬಲಿದಾನಗಳ ಸಂಕೇತವಾಗಿ ಆಚರಿಸುವಂತಹ ಮುಸ್ಲೀಮರ ಬಕ್ರೀದ್‌ಗೆ ದಿನಗಣನೆ ಪ್ರಾರಂಭವಾಗಿದೆ. ಬಕ್ರೀದ್ ಹಿನ್ನೆಲೆಯಲ್ಲಿ ಕುರಿ ಮತ್ತು ಮೇಕೆಗಳಿಗೆ ಬೇಡಿಕೆ ಹೆಚ್ಚಿದೆ. ಸಾಮಾನ್ಯವಾಗಿ 7 ರಿಂದ 8 ಸಾವಿರಕ್ಕೆ ಮಾರಾಟವಾಗುತ್ತಿದ್ದ ಕುರಿಗಳಿಗೆ ಭಾರಿ ಬೆಲೆ ಬಂದಿದ್ದು, ಜೋಡಿ ಕುರಿಗೆ ಸುಮಾರು 50ಸಾವಿರಕ್ಕೂ ಹೆಚ್ಚಿನ ಬೆಲೆಗೆ ಮಾರಾಟವಾಗುತ್ತಿದೆ.

ಈ ಬಾರಿ ಭರ್ಜರಿಯಾಗಿ ಬಕ್ರೀದ್ ಆಚರಣೆ ಮಾಡುವ ಹಿನ್ನೆಲೆಯಲ್ಲಿ ಕುರಿ ಮತ್ತು ಮೇಕೆಗಳನ್ನು ಖರೀದಿಸಲು ಮುಂದಾಗಿದ್ದಾರೆ.

ಜೂನ್ 17ರಂದು ಬಕ್ರೀದ್ ಹಬ್ಬವನ್ನು ಮುಸಲ್ಮಾನರು ಆಚರಿಸಲಿದ್ದಾರೆ. ಈಗಾಗಲೇ ಹೊಸಕೋಟೆ ತಾಲೂಕಿನ ಹಿಂಡಿಗನಾಳ ಸಂತೆಯಲ್ಲಿ ಪ್ರತಿವರ್ಷವೂ ಕುರಿಗಳ ವ್ಯಾಪಾರ ಜೋರಾಗಿ ನಡೆಯಲಿದೆ. ಮನೆಮನೆಗೂ ಹೋಗಿ ಕುರಿ ವ್ಯಾಪಾರ: ಬಕ್ರೀದ್ ಹಬ್ಬದ ಹಿನ್ನೆಲೆಯಲ್ಲಿ ಮುಸ್ಲೀಂ ಸಮುದಾಯದವರು ಕುರಿಗಳನ್ನು ಬಲಿ ಕೊಡುತ್ತಾರೆ. ಹೀಗಾಗಿ ಮೂರು ಮಾರುಕಟ್ಟೆಯಲ್ಲಿ ಸಹಜವಾಗಿಯೇ ಕುರಿ ಬೆಲೆ ಗಗನಕ್ಕೇರಿರುತ್ತದೆ. ಈ ಪ್ರದೇಶದಲ್ಲಿ ಮುಸ್ಲೀಮರು ಕುರಿಗಳನ್ನು ಸಾಕಾಣಿಕೆ ಮಾಡುವವರ ಮನೆಗೆ ಹೋಗಿ ವ್ಯಾಪಾರ ಕುದುರಿಸಿಕೊಂಡು ಹೋಗುತ್ತಾರೆ. ಕೊಂಡುಕೊಳ್ಳುವವರು ಉಂಡೆ ಕುರಿಯನ್ನೇ ತೂಕ–ಕ್ಕೆ ಹಾಕಿ ಕಿಲೋಗೆ ಸಾವಿರದಂತೆ ನಿಗಧಿಮಾಡಿ ಮಾರಾಟಮಾಡಿಕೊಳ್ಳುತ್ತಾರೆ.

ಅಂಗಾಂಗ ವೈಫಲ್ಯ ಕುರಿ ಬಲಿಗೆ ನಿಷೇಧ: ಗಾಯವಾದ ಕುರಿ ಬಲಿ ನೀಡಲಾಗುವುದಿಲ್ಲ, ಯಾವುದಾದರೂ ಅಂಗ ಊನವಾದರೆ ಬಲಿಗೆ ಅನರ್ಹವಾಗಿರುತ್ತದೆ. ಇದಕ್ಕೆ ಇಸ್ಲಾಂನಲ್ಲಿ



ಆದ್ಯತೆ ಇಲ್ಲ. ಅಲ್ಲದೆ ರೋಗಗ್ರಸ್ಥವಾಗಿರುವ ಕುರಿಯನ್ನು ಬಲಿ ನೀಡುವುದಿಲ್ಲ, ಕುರಿಯ ಕೊಂಬು ಮುರಿದಿದ್ದರೂ ಸಹ ಬಲಿ ನೀಡಲು ಅನರ್ಹವಾಗಿರುತ್ತದೆ. ಈ ಸಮಯದಲ್ಲಿ ಗಾಳಿ ಮಳೆಗಾಲವಾಗಿದ್ದು, ಇದನ್ನು ಶೀತದಿಂದ ಸಂರಕ್ಷಿಸುವುದು, ಅಂಗಗಳಿಗೆ ಗಾಯವಾಗದಂತೆ ನೋಡಿಕೊಳ್ಳುವುದು ಸವಾಲಿನ ಕೆಲಸವಾಗಿರುತ್ತದೆ ಎಂದು ಮುಸ್ಲಿಂ ಮುಖಂಡ ಫಸಲ್ ಪಾಷ ಹೇಳುತ್ತಾರೆ.

ಒಂದು ಕುರಿ ತೂಕಕ್ಕೆ ತಕ್ಕಂತೆ 10 ರಿಂದ 25 ಸಾವಿರದವರೆಗೂ ಮಾರಾಟವಾಗುತ್ತದೆ. ಪ್ರಸ್ತುತ ಮಾರುಕಟ್ಟೆಯಲ್ಲಿ ಕುರಿ ಮಾಂಸದ ದರ 400 ರಿಂದ 500 ರೂ.ವರೆಗೆ ಇದೆ. ಕೊಂಡುಕೊಳ್ಳುವವರು ಉಂಡೆ ಕುರಿಯನ್ನೇ ತೂಕಕ್ಕೆ ಹಾಕಿ ಕಿಲೋಗೆ ಸಾವಿರದಂತೆ ನಿಗಧಿ ಮಾಡಿ ಮಾರಾಟ ಮಾಡಿಕೊಳ್ಳುತ್ತಾರೆ. ಮಾರಾಟ ಮಾಡಲು ಹಲವು ತಿಂಗಳಿನಿಂದ ಕುರಿಗಳನ್ನು ತಯಾರು ಮಾಡಲಾಗುತ್ತದೆ. ಕೊಬ್ಬಿದ್ದ, ಹೆಚ್ಚು ತೂಕವುಳ್ಳ, ಕೊಬ್ಬಿರುವ ಕುರಿಗಳಿಗೆ ಬೇಡಿಕೆ ಇರುವ ಕಾರಣ ನಾವು ಇದಕ್ಕೆ ಹೆಚ್ಚಿನ ಆದ್ಯತೆ ನೀಡುತ್ತೇವೆ. ಹಬ್ಬ ಇನ್ನೇನು ಒಂದು ತಿಂಗಳು ಇದ್ದಂತೆ ಕುರಿಗೆ ಹೆಚ್ಚು ಆರೈಕೆ ಮಾಡಲಾಗುತ್ತದೆ. ಪೌಷ್ಟಿಕ ಆಹಾರ, ತಾಜ ಸೊಪ್ಪು ಹೀಗೆ ಹತ್ತು ಹಲವಾರು ರೀತಿಯಲ್ಲಿ ಕುರಿಯನ್ನು ನೋಡಿಕೊಳ್ಳಲಾಗುತ್ತದೆ. ಮಗುವಿನಂತೆ ಪೋಷಿಸುವುದು ಮುಖ್ಯವಾಗಿರುತ್ತದೆ ಅಂತಹ ಕುರಿಯನ್ನು ಬಕ್ರೀದ್ ಹಬ್ಬದಲ್ಲಿ ಅಲ್ಲಹನಿಗೆ ಬಲಿ ನೀಡಲಾಗುತ್ತದೆ ಎಂದು ಜಾಮೀಯ ಮಸೀದಿಯ ಹೈದರ್ ಸಾಬ್ ಹೇಳುತ್ತಾರೆ.

ಬಾಕ್ಸ್

ಹಬ್ಬವನ್ನು ಮಾಡುವ ವಿಶೇಷತೆ : ಪ್ರವಾದಿಗಳಲ್ಲಿ ಒಬ್ಬರಾದ ಪ್ರವಾದಿ ಇಬ್ರಾಹಿಂ ತಮ್ಮ ಮಗ ಇಸ್ಮಾಯಿಲ್‌ನನ್ನು ಸೃಷ್ಟಿಕರ್ತ ಅಲ್ಲಾಹನಿಗೆ ಬಲಿ ಕೊಡಲು ಮುಂದಾದ ದಿನವನ್ನು ಈದ್–ಉಲ್–ಅದಾ (ಬಕ್ರೀದ್) ಎನ್ನಲಾಗುತ್ತದೆ. ತನ್ನ

> **ಬಕ್ರೀದ್ ಹಬ್ಬದಲ್ಲಿ ಕುರಿಗಳಿಗೆ ಬೇಡಿಕೆ ಹೆಚ್ಚಾಗಿರುತ್ತದೆ. ನಮ್ಮ ಮನೆಯಲ್ಲಿ 10–15 ಕುರಿಗಳನ್ನು ಸಾಕಲಾಗಿದೆ. ಮೂರು ಕುರಿಗಳನ್ನು ಈಗಾಗಲೇ ಮಾರಿದ್ದೇವೆ. ಇನ್ನುಳಿದ ಕುರಿಗಳನ್ನು ಹಾಗೇಯೆ ಉಳಿಸಿಕೊಂಡು ಸಾಕಾಣಿಕೆ ಮಾಡಲಾಗುತ್ತಿದೆ. ಮುಸಲ್ಮಾನರು ಮನೆಯ ಹತ್ತಿರವೇ ಬಂದು ಖರೀದಿಸುವುದರಿಂದ ಮನೆ ಬಾಗಿಲಿಗೆ ಹಣ ಬರುವಂತೆ ಆಗಿದೆ. ತಾಲೂಕಿನಲ್ಲಿ ಕುರಿ ಸಾಕಾಣಿಕೆ ಹೆಚ್ಚು ಮಾಡುವುದರಿಂದ ಒಂದು ಕುರಿ ಮತ್ತು ಉಣ್ಣೆ ನಿಗಮವನ್ನು ಸ್ಥಾಪಿಸಿದರೆ ರೈತರಿಗೆ ಹೆಚ್ಚಿನ ಅನುಕೂಲವಾಗುತ್ತದೆ**
> – ರಮೇಶ್, ಕುರಿ ಸಾಕಾಣಿಕೆಗಾರ, ಬೈಚಾಪುರ

ಮಗನನ್ನು ಬಲಿ ಕೊಡುವಾಗ ಕಣ್ಣಿಗೆ ಬಟ್ಟೆ ಕಟ್ಟಿಕೊಂಡು ಬಿಸ್ಮಿಲ್ಲಾ ಎಂದು ಹೇಳಿ ಮಗನ ಕತ್ತಿನ ಮೇಲೆ ಹಲವಾರು ಬಾರಿ ಕತ್ತಿ ಹರಿಸಿದರೂ ಕತ್ತು ಕುಯ್ಯುವುದಿಲ್ಲ. ಆ ವೇಳೆಯಲ್ಲಿ ದೇವದೂತ ಜಿಬ್ರಾಯಿಲ್ ಪ್ರತ್ಯಕ್ಷರಾಗಿ ಒಂದು ದುಂಬಿ (ದಷ್ಟಪುಷ್ಟ ಕುರಿ)ಯನ್ನು ಆ ಜಾಗದಲ್ಲಿ ಇಡುತ್ತಾರೆ. ಆಗ ಸತ್ಯ ನಿಷ್ಠೆಯಿಂದ ಆ ಕುರಿಯನ್ನು ಬಲಿ ನೀಡುವ ಮೂಲಕ ಇಸ್ಲಾಂ ಧರ್ಮದಲ್ಲಿ ಇದೊಂದು ಸುವರ್ಣ ದಿನವಾಗಿಬಿಡುತ್ತದೆ.

ಬಲಿಕೊಟ್ಟ ಪ್ರಾಣಿಯ ಮಾಂಸ ಮೂರು ಭಾಗ: ಬಕ್ರೀದ್ ಹಬ್ಬದಲ್ಲಿ ಬಲಿ ನೀಡಿದ ಪ್ರಾಣಿಯ ಮಾಂಸವನ್ನು ಮೂರು ಭಾಗಗಳಾಗಿ ವಿಂಗಡಿಸಿ ಒಂದು ಭಾಗವನ್ನು ಸಂಬಂಧಿಕರಿಗೆ, ಎರಡನೇ ಭಾಗವನ್ನು ಬಡವರಿಗೆ ಹಂಚುತ್ತಾರೆ. ಮೂರನೇ ಭಾಗವನ್ನು ಮನೆಯವರಿಗಾಗಿ ಉಳಿಸಿಕೊಳ್ಳುವ ಸಂಪ್ರದಾಯವಿದೆ. ಪ್ರವಾದಿ ಇಬ್ರಾಹಿಂನ ದೈವಾಜ್ಞೆ ಪಾಲನೆಯ ನೆನಪನ್ನು ಬಲಿದಿನದಂದು ಪುನರಾವರ್ತನೆಗೆ ಒಳಪಡಿಸುವುದು ವಿಶೇಷ.



ಪ್ರಮಾಣವಚನ ಸ್ವೀಕಾರ

ಕಾಯಕಯೋಗಿ ಸುದ್ದಿ

ಬೆಂಗಳೂರು: ಶೋರಾಪುರ ವಿಧಾನಸಭಾ ಕ್ಷೇತ್ರಕ್ಕೆ ನಡೆದ ಉಪ ಚುನಾವಣೆಯಲ್ಲಿ ಶಾಸಕರಾಗಿ ಆಯ್ಕೆಯಾದ ರಾಜಾ ವೇಣುಗೋಪಾಲ ನಾಯಕ ಅವರು ವಿಧಾನ ಸೌಧದ ಮೊದಲನೇಯ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 106 ರಲ್ಲಿ ಇಂದು ಪ್ರಮಾಣವಚನ ಸ್ವೀಕರಿಸಿದರು.

ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ.ಖಾದರ್ ಫರೀದ್ ಅವರು ನೂತನ ಶಾಸಕರಾದ ರಾಜಾ ವೇಣುಗೋಪಾಲ ನಾಯಕ ಅವರಿಗೆ ಪ್ರಮಾಣವಚನ ಬೋಧಿಸಿ, ಅಭಿನಂದನೆ ಸಲ್ಲಿಸಿದರು.

ಈ ವೇಳೆ, ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆ ಸಚಿವರಾದ ಶರಣಬಸಪ್ಪ ದರ್ಶನಾಪುರ, ಶಾಸಕರುಗಳಾದ ಬಿ.ಬಿ. ಚಿಮ್ಮನಕಟ್ಟಿ, ಅಲ್ಲಮ ಪ್ರಭು ಪಾಟೀಲ್, ಜಗದೇವ ಗುತ್ತೇದಾರ್, ಸಂಸದರಾದ ಕುಮಾರ್ ನಾಯಕ್, ವಿಧಾನ ಸಭೆಯ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು.

ಡಾ.ನಾಗಲಕ್ಷ್ಮಿ ಚೌಧರಿ ಮೆಟ್ರೋದಲ್ಲಿ ಪ್ರಯಾಣ



ಕಾಯಕಯೋಗಿ ಸುದ್ದಿ

ಬೆಂಗಳೂರು: ಮೆಟ್ರೋ ರೈಲಿನಲ್ಲಿ ಪ್ರಯಾಣಿಸುವ ಮಹಿಳೆಯರ ಹಾಗೂ ಮೆಟ್ರೋ ಮಹಿಳಾ ಸಿಬ್ಬಂದಿಗಳ ಸಮಸ್ಯೆಗಳನ್ನು ತಿಳಿಯಲು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಚೌಧರಿ ಅವರು ವಿಜಯನಗರ ಮೆಟ್ರೋ ನಿಲ್ದಾಣದಿಂದ ವೈಟ್‌ಫೀಲ್ಡ್ ಮೆಟ್ರೋ ನಿಲ್ದಾಣದವರೆಗೆ ಪ್ರಯಾಣಿಸಿ ನಂತರ ಅಲ್ಲಿಂದ ವಿಶ್ವೇಶ್ವರಯ್ಯ ನಿಲ್ದಾಣಕ್ಕೆ (ಸೆಂಟ್ರಲ್ ಕಾಲೇಜು) ಪ್ರಯಾಣಿಸಿದರು.

ಈ ಸಮಯದಲ್ಲಿ ಮೆಟ್ರೋದ ಹಿರಿಯ ಅಧಿಕಾರಿಗಳೊಂದಿಗೆ ಹಾಗೂ ಮಹಿಳಾ ಪ್ರಯಾಣಿಕರೊಂದಿಗೆ ಮಹಿಳೆಯರ ಸಮಸ್ಯೆಗಳು, ಸುರಕ್ಷತೆ ಮುಂತಾದ ವಿಷಯಗಳ ಕುರಿತಂತೆ ಚರ್ಚಿಸಿದರು.

ಪೀಕ್ ಅವರ್‌ನಲ್ಲಿ ಮಹಿಳಾ ಪ್ರಯಾಣಿಕರಿಗೆ ನಮ್ಮ ಮೆಟ್ರೋದಲ್ಲಿ ದಟ್ಟಣೆಯಿದ್ದು, ಆ ಸಮಯದಲ್ಲಿ ಮಹಿಳೆಯರಿಗಾಗಿ ಇನ್ನೊಂದು ಬೋಗಿಯನ್ನು ಮೀಸಲಿಡುವಂತೆ ಅಧಿಕಾರಿಗಳಿಗೆ ತಿಳಿಸಿದರು. ಈ ವಿಷಯಕ್ಕೆ ಮೆಟ್ರೋ ಅಧಿಕಾರಿಗಳು ಸಕಾರಾತ್ಮಕವಾಗಿ ಸ್ಪಂದಿಸಿ ಕ್ರಮವಹಿಸುವುದಾಗಿ ತಿಳಿಸಿದ್ದಾರೆ ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಉಚಿತ ಕಣ್ಣಿನ ತಪಾಸಣಾ ಶಿಬಿರ

ಕಾಯಕಯೋಗಿ ಸುದ್ದಿ

ವಿಜಯಪುರ: ಪಟ್ಟಣದ ರೋಟರಿ ಶಾಲೆಯಲ್ಲಿ ಸೋಮವಾರ ರೋಟರಿ ಸಂಸ್ಥೆಯ ವತಿಯಿಂದ ಶಾರದಾ ರೋಟರಿ ಹೆಲ್ತ್ ಕೇರ್ ಸೆಂಟರ್ ಸಹಯೋಗದಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರ ನಡೆಯಿತು. ಈ ಶಿಬಿರದಲ್ಲಿ 95 ಮಂದಿ ನೇತ್ರ ತಪಾಸಣೆ ಮಾಡಿಸಿಕೊಂಡರು. 19 ಮಂದಿಯನ್ನು ಬೆಂಗಳೂರಿನ ಶಾರದಾ ರೋಟರಿ ಹೆಲ್ತ್ ಕೇರ್ ಸೆಂಟರ್‌ಗೆ ಕರೆದುಕೊಂಡು ಹೋಗಿ, ಉಚಿತವಾಗಿ ಶಸ್ತ್ರಚಿಕಿತ್ಸೆ ಮಾಡಿಸಲಾಗಿದೆ ಎಂದು ರೋಟರಿ ಸಂಸ್ಥೆಯ ಅಧ್ಯಕ್ಷೆ ಮಂಜುಳಾ ತಿಳಿಸಿದರು.

ಈ ವೇಳೆ ಮಾತನಾಡಿದ ಅವರು, ರೋಟರಿ ಸಂಸ್ಥೆಯಿಂದ ಪ್ರತಿ ತಿಂಗಳು ಕಣ್ಣಿನ ತಪಾಸಣೆ, ಆರೋಗ್ಯ ತಪಾಸಣೆ ಶಿಬಿರಗಳು ನಡೆಸುತ್ತೇವೆ. ಪಲ್ಸ್ ಪೊಲೀಯೋ ಕಾರ್ಯಕ್ರಮಗಳಲ್ಲಿ ಸಕ್ರೀಯವಾಗಿ ಭಾಗವಹಿಸುವಿಕೆ, ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಬೆಳವಣಿಗೆಗಾಗಿ ವಿಶೇಷ ಶಿಬಿರಗಳನ್ನು ನಡೆಸಲಾಗುತ್ತಿದೆ ಎಂದರು.ಶಾರದಾ ರೋಟರಿ ಹೆಲ್ತ್ ಕೇರ್ ಸೆಂಟರ್ ನ ನೇತ್ರ ಪರೀಕ್ಷಕರಾದ ಡಾ.ಗಿರೀಶ್, ಡಾ.ಹರ್ಷಿತ, ಸಿಬ್ಬಂದಿ ಮಹಾದೇವ ರೋಟರಿ ಸದಸ್ಯರಾದ ಎಸ್. ಮಹೇಶ್, ಸಾಮಾಜಿಕ ಕಾರ್ಯಕರ್ತ ವಿ.ಎನ್.ಸೂರ್ಯಪ್ರಕಾಶ್ ಇದ್ದರು.

ವಿಜಯಪುರ ಪಟ್ಟಣದ ರೋಟರಿ ಶಾಲೆಯಲ್ಲಿ ಆಯೋಜಿಸಿದ್ದ ಉಚಿತ ನೇತ್ರ ತಪಾಸಣಾ ಶಿಬಿರದಲ್ಲಿ ನೇತ್ರ ತಪಾಸಣೆ ಮಾಡಿದರು.

ನಾವೆಲ್ಲರೂ ದೈಹಿಕವಾಗಿ ಮಾತ್ರವಲ್ಲದೇ ಮಾನಸಿಕವಾಗಿಯೂ ಸದೃಢರಾಗಬೇಕು



ಕಾಯಕಯೋಗಿ ಸುದ್ದಿ

ಬೆಂಗಳೂರು: ನಾವೆಲ್ಲರೂ ದೈಹಿಕವಾಗಿ ಮಾತ್ರವಲ್ಲದೇ ಮಾನಸಿಕವಾಗಿಯೂ ಸದೃಢರಾಗಬೇಕು. ಜೊತೆಗೆ ಬೇರೆಯವರಿಗೆ ಸಂತೋಷ ನೀಡಿ ಅವರ ಕಷ್ಟ ಸುಖಗಳಲ್ಲಿ ಭಾಗಿಯಾಗಬೇಕು ಎಂದು ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ.ಖಾದರ್ ಫರೀದ್ ತಿಳಿಸಿದರು.

ಅವರು ಇಂದು ವಿಕಾಸಸೌಧದಲ್ಲಿ ಕರ್ನಾಟಕ ವಿಧಾನಸಭೆಯ ಅಧಿಕಾರಿಗಳಿಗೆ 'ಒತ್ತಡ ನಿರ್ವಹಣೆ' ಮತ್ತು ಸ್ಥಿತಿಸ್ಥಾಪಕತ್ವ ಅಭಿವೃದ್ಧಿ ಹಾಗೂ ಪರಿಣಾಮಕಾರಿ ಸಂವಹನ ಮತ್ತು ನಾಯಕತ್ವ ಅಭಿವೃದ್ಧಿ' ಕುರಿತ ತರಬೇತಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಶಿಕ್ಷಣದ ಗುರಿ ಬರಿ ಅಂಕಗಳಿಕೆಗೆ ಅಷ್ಟೇ ಅಲ್ಲ. ವಿದ್ಯಾರ್ಥಿಗಳು ಸುಶಿಕ್ಷಿತವಾಗುವುದಲ್ಲದೇ, ಸತ್ಪಜೆಗಳಾಗಬೇಕು. ಸಮಸ್ಯೆಯಿಲ್ಲದ ಸಂಸಾರ, ಊರು, ವ್ಯಕ್ತಿಗಳಿಲ್ಲ. ಎಲ್ಲರಿಗೂ ಒತ್ತಡ, ಯೋಚನೆಗಳು ಇರುತ್ತವೆ. ಅದನ್ನು ಮೆಟ್ಟಿ ನಾವು ಉತ್ತಮವಾಗಿ ಕೆಲಸ ನಿರ್ವಹಿಸಬೇಕು. ನಾವು ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ನಮ್ಮಲ್ಲಿರುವ ಒತ್ತಡ ನಿರ್ವಹಣೆ ನಮ್ಮ ಕೈಯಲ್ಲಿದೆ. ಇತರರು ಹೊಗಳಿದಾಗ ನಾವು ಹೇಗೆ ಇಷ್ಟಪಡುತ್ತೇವೆ ಹಾಗೆಯೇ ನಿಂದಿಸಿದವರನ್ನು ದ್ವೇಷಿಸುತ್ತೇವೆ. ಕೆಲವೊಮ್ಮೆ ನಮ್ಮ ಮನಸ್ಸನ್ನು ಇತರರು ನಿಯಂತ್ರಣದಲ್ಲಿಟ್ಟುಕೊಳ್ಳುತ್ತಾರೆ ಎಂದರು.

ಎಲ್ಲರಿಗೂ ಕೆಲಸದಲ್ಲಿ ಒತ್ತಡ ಇರುವುದು ಸಹಜ ಸರ್ಕಾರಿ ಕಚೇರಿಗಳಲ್ಲಿ ನೂರು ಜನ ಕೆಲಸವನ್ನು 70 ಜನ ನಿರ್ವಹಿಸುವ ಪರಿಸ್ಥಿತಿಯಲ್ಲಿದೆ. ಆದರೂ ನಾವು ಸ್ವಪ್ರೇರಣೆಯಿಂದ ಉತ್ತಮವಾಗಿ ಕೆಲಸ ನಿರ್ವಹಿಸಬೇಕು. ಈ ತರಬೇತಿಯಿಂದ ಎಲ್ಲರೂ ಅತ್ಯುತ್ತಮ ಅಧಿಕಾರಿಗಳಾಗಿ ಹೊರಹೊಮ್ಮಬೇಕು. ಜೊತೆಗೆ ನಿಮ್ಮ ಸಿಬ್ಬಂದಿಗೂ ಈ ಕುರಿತು ತರಬೇತಿ ನೀಡಬೇಕು ಎಂದರು.

ಅಲಯನ್ಸ್ ವಿಶ್ವವಿದ್ಯಾಲಯದ ಡಾ.ತೋಸೇಂದ್ರ ದ್ವಿವೇದಿ ಮಾತನಾಡಿ ನಾವು ಜೀವನದಲ್ಲಿ ಬೇಕಿಲ್ಲದ ಪ್ರಮುಖವಲ್ಲದ ವಿಷಯಗಳ ಕುರಿತು ಚಿಂತಿಸುತ್ತೇವೆ. ಕೆಲವರಿಗೆ ಕೆಲಸ ಸ್ಥಳಗಳು, ಕುಟುಂಬ ನಿರ್ವಹಣೆಯಲ್ಲಿ ಒತ್ತಡ ಇರುತ್ತದ್ದಲ್ಲದೇ, ವಿದ್ಯಾರ್ಥಿಗಳಿಗೆ ಪರೀಕ್ಷೆ ಎದುರಿಸಲು ಒತ್ತಡವೆನಿಸುತ್ತದೆ. ಒತ್ತಡ ನಿರ್ವಹಣೆಗೆ ವ್ಯಾಯಾಮ ಬಹಳ ಸಹಕಾರಿ. ಎಲ್ಲರನ್ನೂ ಒಗ್ಗೂಡಿಸಿ ಸಮರಸದಿಂದ ಕೆಲಸ ನಿರ್ವಹಿಸಿದರೆ ಒತ್ತಡ ಇರುವುದಿಲ್ಲ ಎಂದರು.

ಕಾರ್ಯಕ್ರಮದಲ್ಲಿ ವಿಧಾನಸಭೆಯ ಕಾರ್ಯದರ್ಶಿಗಳಾದ ವಿಶಾಲಾಕ್ಷಿ ಎಂ.ಕೆ, ಅಲಯನ್ಸ್ ವಿಶ್ವವಿದ್ಯಾಲಯದ ರಿಜಿಸ್ಟ್ರಾರ್ ಜನರಲ್ ಸುರೇಖಾ ಶೆಟ್ಟಿ, ಪ್ರಾಧ್ಯಾಪಕರಾದ ಉಮಾ ಶ್ರೀಧರ್ ಉಪಸ್ಥಿತರಿದ್ದರು.

ನೀರಿನ ಅದಾಲತ್

ಬೆಂಗಳೂರು: ಬೆಂಗಳೂರು ಜಲ ಮಂಡಳಿಯ ವಿವಿಧ ಉಪ ವಿಭಾಗಗಳಾದ ಉತ್ತರ–2–1, ದಕ್ಷಿಣ–1–1, ದಕ್ಷಿಣ–2–1, ನೈರುತ್ಯ –1, ನೈರುತ್ಯ – 4, ಪೂರ್ವ –1–2, ಪೂರ್ವ –2–2, ಆಗ್ನೇಯ – 2, ಆಗ್ನೇಯ 5, ಪಶ್ಚಿಮ–1–2 ಮತ್ತು ಪಶ್ಚಿಮ–2–2, ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದು ಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಜೂನ್ 13 ರಂದು ಬೆಳಿಗ್ಗೆ 9.30 ಗಂಟೆಯಿಂದ 11 ಗಂಟೆಯವರೆಗೆ ನೀರಿನ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ.

ಯಲಹಂಕ ಓಲ್ಡ್ ಟೌನ್, ಯಲಹಂಕ ನ್ಯೂಟೌನ್, ಅಟ್ಟೂರು, ಜೆ.ಪಿ.ನಗರ–2, ಕೊತ್ತನೂರು ದಿಣ್ಣೆ, ವಿಜಯಬ್ಯಾಂಕ್ ಕಾಲೋನಿ, ಅರಕೆರೆ & ಮೈಕೋ ಲೇಔಟ್, ಜೆ.ಪಿ.ನಗರ 1&3, ಜಯನಗರ 4ನೇ ಟಿ ಬ್ಲಾಕ್, ಜಯನಗರ 4ನೇ ಬ್ಲಾಕ್, ಹೊಂಬೇಗೌಡನಗರ, ಬೈರಸಂದ್ರ, ಎಲ್.ಎಲ್.ಆರ್, ಚಿಕ್ಕಲಾಲ್‌ಬಾಗ್, ಬನ್ನಪ್ಪ ಪಾರ್ಕ್, ಸುಧಾಮನಗರ –1, ಕತ್ರಿಗುಪ್ಪೆ, ಹೊಸಕೆರೆಹಳ್ಳಿ, ದೇವಗಿರಿ–1, ಇಟ್ಟಮಡು, ಬನಗಿರಿನಗರ, ಎ.ನಾರಾಯಣಪುರ, ದೊಡ್ಡನಕುಂದಿ, ವಿಜ್ಞಾನನಗರ, ಬಾಣಸವಾಡಿ, ಓ.ಎಂ.ಬಿ.ಆರ್., ಲಿಂಗರಾಜಪುರಂ, ಕಸ್ತೂರಿನಗರ, ಹಲಸೂರು, ದೊಮ್ಮಲೂರು, ಮಾರತ್‌ಹಳ್ಳಿ, ಕೋರಮಂಗಲ– 1&2, ವಿಜಯನಗರ ಓ.ಎಚ್.ಟಿ, ಮೂಡಲಪಾಳ್ಯ, ನಾಗರಬಾವಿ, ಅನ್ನಪೂರ್ಣೇಶ್ವರಿನಗರ, ಸರ್. ಎಂ.ವಿ ಲೇಔಟ್, ಮೂಡಲಪಾಳ್ಯ ಸೇವಾ ಠಾಣೆಗಳಲ್ಲಿ ಅದಾಲತ್ ನಡೆಯಲಿದೆ.

ಸಾರ್ವಜನಿಕರು ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916ಗೆ ಕರೆ ಮಾಡಿ ದೂರುಗಳನ್ನು ದಾಖಲಿಸಬಹುದು. ಹಾಗೂ ವಾಟ್ಸ್‌ಆಫ್ ಸಂಖ್ಯೆ 8762228888 ಸಂದೇಶದ ಮೂಲಕ ದೂರನ್ನು ಸಲ್ಲಿಸಬಹುದಾಗಿದೆ ಎಂದು ಬೆಂಗಳೂರು ಜಲ ಮಂಡಳಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅನಾರೋಗ್ಯದಿಂದ ಕೋರಮಂಗಲ

ಗ್ರಾ.ಪಂ ಅಧ್ಯಕ್ಷ ನಿಧನ

ಕಾಯಕಯೋಗಿ ಸುದ್ದಿ

ವಿಜಯಪುರ: ಪಟ್ಟಣ ಸಮೀಪದ ಕೋರಮಂಗಲ ಗ್ರಾಮ ಪಂಚಾಯಿತಿ ಅಧ್ಯಕ್ಷ ಕೆ.ಎಂ.ಕೃಷ್ಣಪ್ಪ (72) ಅವರು ಅನಾರೋಗ್ಯದಿಂದ ಸೋಮವಾರ ರಾತ್ರಿ ನಿಧನರಾಗಿದ್ದು, ಮೃತರು ಪತ್ನಿ ಹಾಗೂ ಇಬ್ಬರು ಪುತ್ರರನ್ನು ಅಗಲಿದ್ದಾರೆ.

ಕಳೆದ ಒಂದು ವರ್ಷದಿಂದ ಅನಾರೋಗ್ಯಕ್ಕಿಡಾಗಿದ್ದ ಅವರು, ಕಳೆದ ಕೆಲವು ದಿನಗಳಿಂದ ಬೆಂಗಳೂರಿನ ಖಾಸಗಿ ಆಸ್